

MAG(2)PRB/CR/165/2022-23 Title code: KARKAN27951

# ಮುಂಜಾನೆ ವಾರ್ತೆ

ಇ–ಪೇಪರ್: www.munjanevarthe.com

EDITOR: H.L.AMARANATH

MUNJANE VARTHE

ಸಂಪಾದಕ: ಹೆಚ್.ಎಲ್ ಅಮರನಾಥ್

ಕನ್ನಡ ದಿನಪತ್ರಿಕೆ

VOLUME : 2 ISSUE: 134 ಸಂಪುಟ: 02 ಸಂಚಿಕೆ: 134 ಪುಟಗಳು: 04 munjanevarthe 28 FRIDAY JUNE 2024 28 ಶುಕ್ರವಾರ ಜೂನ್ 2024 ₹ 2



ಜಾಹೀರಾತಿಗಾಗಿ ಸಂಪರ್ಕಿಸಿ

9663122276

www.munjanevarthe.com



ಬೆಂಗಳೂರನ್ನು ಸುಸಜ್ಜಿತ ಮಹಾನಗರವನ್ನಾಗಿ ಕಟ್ಟಲು ಕೆಂಪೇಗೌಡರ ಕೊಡುಗೆ ಅಪಾರ — ವಿವರಪುಟ 02

ಅಂಗನವಾಡಿ ಕಾರ್ಯಕರ್ತರ ಪ್ರತಿಮೆ ಸೇವೆ ಸ್ಮರಿಸಿದ ಶಾಸಕ ಬೇಳೂರು ಗೋಪಾಲಕೃಷ್ಣ... — ವಿವರಪುಟ 03

ಸಾಧಕರಿಗೆ ಅಭಿನಂದನೆ, ಅದ್ದೂರಿ ಕೆಂಪೇಗೌಡರ ಜಯಂತಿ — ವಿವರಪುಟ 04


## ಕನ್ನಡದಲ್ಲೆ ಹಾಡಿ ಹೊಗಳಿದ ಪ್ರಧಾನಿ ನರೇಂದ್ರ ಮೋದಿ



ಪ್ರಧಾನಿ ನರೇಂದ್ರ ಮೋದಿ ನಾಡಪ್ರಭು ಕೆಂಪೇಗೌಡರು ಹಾಗೂ ಅವರ ಸಾಧನೆಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ ಗೌರವ ನಮನ ಸಲ್ಲಿಸಿದ್ದಾರೆ. ಮಾತ್ರವಲ್ಲದೇ ಈ ಹಿಂದೆ ಕೆಂಪೇಗೌಡರ ಬೃಹತ್ ಪ್ರತಿಮೆ ಉದ್ಘಾಟನೆಯ ಫೋಟೋ ಹಂಚಿಕೊಂಡಿದ್ದಾರೆ. ನಾಡಪ್ರಭು ಕೆಂಪೇಗೌಡ ಜಯಂತಿ ಹಿನ್ನೆಲೆ ಟ್ವೀಟ್ ಮಾಡಿರುವ ಮೋದಿ ಅವರು, "ಶ್ರೀ ನಾಡಪ್ರಭು ಕೆಂಪೇಗೌಡರ ಜಯಂತಿಯಂದು ಅವರಿಗೆ ಗೌರವ ನಮನಗಳು. ಅವರು ದೂರದೃಷ್ಟಿ ಮತ್ತು ಆಡಳಿತಾತ್ಮಕ ಕೌಶಲ್ಯಗಳಿಗೆ ಹೆಸರುವಾಸಿಯಾದ ದಾರ್ಶನಿಕರಾಗಿದ್ದರು. ಆರ್ಥಿಕ ಹಿತಚಿಂತನೆ, ಕೃಷಿ, ನೀರಾವರಿ ಮುಂತಾದವುಗಳ ಸುಧಾರಣೆಯಲ್ಲಿ ಅವರು ಮುಂಚೂಣಿಯಲ್ಲಿದ್ದರು" ಎಂದಿದ್ದಾರೆ.

## ನಾಡಪ್ರಭು ಕೆಂಪೇಗೌಡರ ಪ್ರತಿಮೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಲಾರ್ಪಣೆ



ನಾಡಪ್ರಭು ಕೆಂಪೇಗೌಡರ 515ನೇ ಜಯಂತ್ಯೋತ್ಸವ ಸಮಾರಂಭದ ಅಂಗವಾಗಿ ವಿಧಾನ ಸೌಧದ ಆವರಣದಲ್ಲಿರುವ ಅವರ ಪ್ರತಿಮೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾಲಾರ್ಪಣೆ ನೆರವೇರಿಸಿ ಗೌರವ ನಮನ ಸಲ್ಲಿಸಿದರು.ಈ ವೇಳೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್. ಮುನಿಯಪ್ಪ, ಕಂದಾಯ ಸಚಿವ ಕೃಷ್ಣ ಬೈರೇಗೌಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್ ಎಸ್. ತಂಗಡಗಿ, ಶಿವಾಜಿನಗರ ವಿಧಾನಸಭಾ ಕ್ಷೇತ್ರದ ಶಾಸಕ ರಿಜ್ವಾನ್ ಅರ್ಷದ್, ವಿಧಾನ ಪರಿಷತ್ ಶಾಸಕ ನಾಗರಾಜ್ ಯಾದವ್, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಡಳಿತಾಧಿಕಾರಿ ಉಮಾಶಂಕರ್ ಸೇರಿದಂತೆ ಇತರೆ ಗಣ್ಯರು ಉಪಸ್ಥಿತರಿದ್ದರು.

## ಬಿಎಸ್‌ವೈ ವಿರುದ್ಧ ಚಾರ್ಜ್‌ಶೀಟ್!



ಬೆಂಗಳೂರು : ಅಪ್ರಾಪ್ತ ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದಲ್ಲಿ ಪೋಕ್ಸೋ ಕೇಸ್ ಎದುರಿಸುತ್ತಿರುವ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ವಿರುದ್ಧ ಚಾರ್ಜ್ ಶೀಟ್ ಸಲ್ಲಿಕೆ ಮಾಡಲಾಗಿದೆ

ಸಿಐಡಿ ಅಧಿಕಾರಿಗಳು ತನಿಖೆ ಪೂರ್ಣಗೊಳಿಸಿ ಬಿಎಸ್‌ವೈ ವಿರುದ್ಧ ಕೋರ್ಟ್‌ಗೆ ಚಾರ್ಜ್ ಶೀಟ್ ಸಲ್ಲಿಸಿದ್ದಾರೆ. ಬಿಎಸ್ ಯಡಿಯೂರಪ್ಪ ಸೇರಿ ಮರಿಸ್ವಾಮಿ, ರುದ್ರೇಶ್, ಅರುಣ್ ಎಂಬ ಒಟ್ಟು ನಾಲ್ವರ ಹೆಸರನ್ನು ದೋಷಾರೋಪ ಪಟ್ಟಿಯಲ್ಲಿ ಸೇರಿಸಲಾಗಿದೆ. ಇನ್ನು ಪ್ರಕರಣದಲ್ಲಿ 75 ಮಂದಿಯನ್ನು ಸಾಕ್ಷಿಯಾಗಿ ಪರಿಗಣಿಸಲಾಗಿದ್ದು, ಸುಮಾರು 750 ಪುಟಗಳ ಚಾರ್ಜ್ ಶೀಟ್ ಅನ್ನು ಒಂದನೇ ತ್ವರಿತ ವಿಶೇಷ ಕೋರ್ಟ್ಗೆ ಸಿಐಡಿ ಅಧಿಕಾರಿಗಳು ಸಲ್ಲಿಸಿದ್ದಾರೆ. ಸಹಾಯ ಕೇಳಿ ಬಂದಿದ್ದ ತಾಯಿ ಹಾಗೂ ಮಗಳನ್ನು ಮನೆಯಲ್ಲೇ ಮಾತನಾಡಿಸಿ ಅಪ್ರಾಪ್ತೆ ಮೇಲೆ ಬಿಎಸ್‌ವೈ ಲೈಂಗಿಕ ದೌರ್ಜನ್ಯ ಎಸಗಿದ್ದಾರೆಂಬ ಆರೋಪದಡಿ ಬೆಂಗಳೂರಿನ ಸದಾಶಿವ ನಗರ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣ ಇದಾಗಿದ್ದು, ಇದೀಗ ತನಿಖೆ ಮುಕ್ತಾಯವಾಗಿದೆ.

## ನಟ ದರ್ಶನ್‌ಗೆ ಕಂಟಕವಾಯ್ತು

ಬೆಂಗಳೂರು: ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಕೊಲೆ ಪ್ರಕರಣದ ಎ1 ಆರೋಪಿ ಪವಿತ್ರಾ ಗೌಡ, ಎ2 ಆರೋಪಿ ನಟ ದರ್ಶನ್ ಮತ್ತು ಪಟಾಲಂ ಗ್ಯಾಂಗ್ ಜೈಲು ಸೇರಿದೆ. ಇನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನಟ ದರ್ಶನ್‌ಗೆ ಮತ್ತೊಂದು ಸಂಕಷ್ಟ ಎದುರಾಗಿದೆ.

ರೇಣುಕಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಪಾಲಾಗಿರುವ ನಟ ದರ್ಶನ್‌ಗೆ ಇದೀಗ ಮತ್ತೊಂದು ಸಂಕಷ್ಟ ಎದುರಾಗಿದ್ದು, ಆರೋಪಿಗಳ ಮನೆಯಲ್ಲಿ ಸಿಕ್ಕ 70,00,000 ರೂಪಾಯಿ ಹಣದ ತನಿಖೆ ನಡೆಸುವಂತೆ ಆದಾಯ ತೆರಿಗೆ ಇಲಾಖೆಗೆ ಪೊಲೀಸರು ಪತ್ರ ಬರೆದಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ.

ರೇಣುಕಾಸ್ವಾಮಿ ಕೊಲೆಯ ನಂತರ ಶವ ಸಾಗಾಟಕ್ಕೆ ನಟ ದರ್ಶನ್ 30,00,000 ರೂಪಾಯಿ ನೀಡಿದ್ದರು ಎನ್ನುವ ಮಾಹಿತಿಯೊಂದು ಇತ್ತೀಚೆಗಷ್ಟೇ ಬಟಾಬಯಲಾಗಿತ್ತು. ಈಗಾಗಲೇ ಆರೋಪಿಗಳ ಮನೆಯಲ್ಲಿ ಒಟ್ಟು 70,00,000 ರೂಪಾಯಿ ನಗದು ವಶಕ್ಕೆ ಪಡೆಯಲಾಗಿದ್ದು, ಈ ಸಂಬಂಧ ತನಿಖೆ ನಡೆಸುವಂತೆ ಕೋರಿ ಐಟಿ ಇಲಾಖೆಗೆ ಪೊಲೀಸರು ಮನವಿ ಮಾಡಿದ್ದಾರೆ ಎಂದು ತಿಳಿದುಬಂದಿದೆ.

## ಶೇ.15ರಷ್ಟು ವೇತನ ಹೆಚ್ಚಳ

ಬೆಂಗಳೂರು: ಮಾನ್ಯ ಸಾರಿಗೆ ಹಾಗೂ ಮುಜರಾಯಿ ಸಚಿವರ ಆದೇಶದಂತೆ ನಿವೃತ್ತಿ ಹೊಂದಿದ ಅಧಿಕಾರಿಗಳು ಹಾಗೂ ನೌಕರರು ಸುಮಾರು 10000 ಮಂದಿಗೆ ಈ ಹಿಂದೆ ದಿನಾಂಕ 01.03.2023 ರಿಂದ ಜಾರಿಗೊಳಿಸಿದ ಶೇ.15 ರಷ್ಟು ಹೆಚ್ಚಿಸಿ ಅದರಂತೆ ವೇತನ ಶ್ರೇಣಿಗಳನ್ನು ಪರಿಷ್ಕರಿಸಿ, ಅಂತಿಮ ಆರ್ಥಿಕ ಸೌಲಭ್ಯಗಳಾದ ಉಪದಾನ ಮತ್ತು ನಿವೃತ್ತಿ



ಗಳಿಕೆ ರಜೆ ನಗದೀಕರಣ( ಅಂದಾಜು ನಾಲ್ಕು ಸಾರಿಗೆ ನಿಗಮಗಳ ಮೊತ್ತ ರೂ.220 ಕೋಟಿ ) ಬಿಡುಗಡೆ ಮಾಡಲು ಆದೇಶ ಈ ಸಂಬಂಧ ಹಲವು ಬಾರಿ ಮಾನ್ಯ ಸಾರಿಗೆ ಸಚಿವ ರನ್ನು ಭೇಟಿ ಮಾಡಿ ನಮಗೆ ಸದರಿ ಆದೇಶವನ್ನು ಬಿಡುಗಡೆಗೊಳಿಸ ಬೇಕೆಂದು ಕಾರ್ಮಿಕ ಸಂಘಟನೆಗಳ ಮುಖಂಡರುಗಳು ಮನವಿ ಸಲ್ಲಿಸಿದ್ದರು. ಈ ಮನವಿಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿ ಮಾರ್ಚ್‌ನಲ್ಲಿಯೇ ಭರವಸೆ ನೀಡಿದ್ದ ಸಾರಿಗೆ ಸಚಿವರು ಚುನಾವಣೆ ನೀತಿ ಸಂಹಿತೆ ಕಾರಣ ಬಿಡುಗಡೆಯಾಗದೆ ಉಳಿದಿದ್ದ ಆದೇಶಕ್ಕೆ ಸಹಿಯಾಗಿದೆ.

## ಹೊಸ ಸರ್ಕಾರ ಬಂದಾಗಲೆಲ್ಲ ಬೆಲೆ ಏರಿಕೆ ಸಾಮಾನ್ಯ



ಬೆಳಗಾವಿ: ಹೊಸ ಸರ್ಕಾರ ಅಧಿಕಾರಕ್ಕೆ ಬಂದಾಗಲೆಲ್ಲಾ ಬೆಲೆ ಏರಿಕೆ ಸಾಮಾನ್ಯ ಎಂದು ಹೇಳುವ ಮೂಲಕ ರಾಜ್ಯದಲ್ಲಿ ಇತ್ತೀಚೆಗೆ ಹಾಲು ಮತ್ತು ಇಂಧನ ಬೆಲೆ ಏರಿಕೆಯಾಗುತ್ತಿರುವುದನ್ನು ಕೃಷಿ ಸಚಿವ ಎನ್ ಚಲುವರಾಯಸ್ವಾಮಿ ಅವರು ಸಮರ್ಥಿಸಿಕೊಂಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 2014ರಲ್ಲಿ ಕೇಂದ್ರದಲ್ಲಿ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬಂದಾಗ ಪೆಟ್ರೋಲ್, ಡೀಸೆಲ್ ಮತ್ತು ಎಲ್‌ಪಿಜಿ ಬೆಲೆಗಳನ್ನು ಹೆಚ್ಚಿಸಲಾಗಿತ್ತು. ಕರ್ನಾಟಕಕ್ಕೆ ಬರಬೇಕಿದ್ದ ಅನುದಾನವನ್ನು ಕೂಡ ಕೇಂದ್ರ ಸರ್ಕಾರ ಕೊಟ್ಟಿಲ್ಲ. ಮಹಾರಾಷ್ಟ್ರ, ತೆಲಂಗಾಣ ಸೇರಿ ಬೇರೆ ರಾಜ್ಯಗಳಿಗೆ ಹೋಲಿಸಿದರೆ ನಮ್ಮ ರಾಜ್ಯದಲ್ಲಿ ಪೆಟ್ರೋಲ್ ಬೆಲೆ ಕಡಿಮೆ ಇದೆ ಎಂದು ಹೇಳಿದರು.

## 70 ವರ್ಷ ಮೇಲ್ಪಟ್ಟವರಿಗೆ ಉಚಿತ ಚಿಕಿತ್ಸೆ

ನವದೆಹಲಿ : 70 ವರ್ಷ ಮೇಲ್ಪಟ್ಟ ಎಲ್ಲ ಭಾರತೀಯ ನಾಗರಿಕರಿಗೆ ಆಯುಷ್ಮಾನ್ ಭಾರತ್ ಆರೋಗ್ಯ ವಿಮಾ ಯೋಜನೆಯಡಿಯಲ್ಲಿ ಉಚಿತ ಚಿಕಿತ್ಸೆ ಒದಗಿಸಲಾಗುವುದು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ಸಂಸತ್ತಿನ ಜಂಟಿ ಅಧಿವೇಶನವನ್ನುದ್ದೇಶಿಸಿ ಮಾತನಾಡಿದ ಅವರು, ಆಯುಷ್ಮಾನ್ ಭಾರತ್ ಪ್ರಧಾನ್ ಮಂತ್ರಿ ಜನ್ ಆರೋಗ್ಯ ಯೋಜನೆಯಡಿಯಲ್ಲಿ ದೇಶದ 55 ಕೋಟಿ ಫಲಾನುಭವಿಗಳಿಗೆ ಉಚಿತ ಆರೋಗ್ಯ ಸೇವೆಗಳನ್ನು ಒದಗಿಸಲಾಗುತ್ತಿದೆ ಎಂದರು. ಈ ಕ್ಷೇತ್ರದಲ್ಲಿ ಸರ್ಕಾರ ಇನ್ನೊಂದು ನಿರ್ಧಾರ ಕೈಗೊಳ್ಳಲಿದೆ. ಈಗ 70 ವರ್ಷ



ಮೇಲ್ಪಟ್ಟ ಪ್ರತಿಯೊಬ್ಬ ನಾಗರಿಕರಿಗೆ ಆಯುಷ್ಮಾನ್ ಭಾರತ್ ಯೋಜನೆಯಡಿಯಲ್ಲಿ ಉಚಿತ ಚಿಕಿತ್ಸೆ ಒದಗಿಸಲಾಗುವುದು ಎಂದು ಮುರ್ಮು ಹೇಳಿದರು. ವಿಶ್ವದ ಅತಿದೊಡ್ಡ ಸಾರ್ವಜನಿಕ ಅನುದಾನಿತ ಆರೋಗ್ಯ ವಿಮಾ ಯೋಜನೆಯಾದ ಎಬಿ–ಪಿಎಂಜೆಎವೈ, 12 ಕೋಟಿ ಕುಟುಂಬಗಳಿಗೆ ದ್ವಿತೀಯ ಮತ್ತು ತೃತೀಯ ಆರೈಕೆ ಆಸ್ಪತ್ರೆಗೆ ದಾಖಲಾಗಲು ಪ್ರತಿ ಕುಟುಂಬಕ್ಕೆ ವರ್ಷಕ್ಕೆ 5 ಲಕ್ಷ ರೂ.ಗಳ ಆರೋಗ್ಯ ರಕ್ಷಣೆಯನ್ನು ಒದಗಿಸುವ ಬೃಹತ್ ಗುರಿಯನ್ನು ಹೊಂದಿದೆ ಎಂದು ದ್ರೌಪದಿ ಮುರ್ಮು ತಿಳಿಸಿದರು. ಭಾರತವು ಐಟಿಯಿಂದ ಪ್ರವಾಸೋದ್ಯಮದವರೆಗೆ ಮತ್ತು ಆರೋಗ್ಯದಿಂದ ಸ್ವಾಸ್ಥ್ಯದವರೆಗೆ ಪ್ರತಿಯೊಂದು ಕ್ಷೇತ್ರದಲ್ಲೂ ನಾಯಕನಾಗಿ ಹೊರಹೊಮ್ಮುತ್ತಿದೆ. ಡಿಜಿಟಲ್ ಪಾವತಿಯ ವಿಚಾರದಲ್ಲಿ ಭಾರತವು ವಿಶ್ವದಲ್ಲಿ ಭಾರಿ ಮುಂದಿದೆ. ಇದಕ್ಕಾಗಿ ನಾವು ಹೆಮ್ಮೆಪಡಬೇಕು ಎಂದರು.

## ಡಿಕೆಶಿಯನ್ನು ಸಿಎಂ ಮಾಡಿ ಕೆಂಪೇಗೌಡ ಜಯಂತಿಯಲ್ಲಿ ಸ್ವಾಮೀಜಿ ಬೇಡಿಕೆ



ಸಿಎಂ ಸಿದರಾಮಯ್ಯ ಮುಂದೆ ಡಿಕೆ ಶಿವಕುಮಾರ್ ಅವರನ್ನು ಸಿಎಂ ಮಾಡಿ ಎಂದು ಸ್ವಾಮೀಜಿಯೊಬ್ಬರು ಬೇಡಿಕೆ ಇಟ್ಟ ಪ್ರಸಂಗ ನಡೆದಿದೆ. ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನ ಮಠದ ಚಂದ್ರಶೇಖರ ಸ್ವಾಮೀಜಿ ಅವರು ಸಿದ್ದರಾಮಯ್ಯ ಅವರಿಗೆ ವೇದಿಕೆಯಲ್ಲೇ ಬಹಿರಂಗವಾಗಿ ಈ ಬೇಡಿಕೆಯನ್ನು ಇಟ್ಟಿದ್ದಾರೆ.

## ಮುಜರಾಯಿ ದೇವಾಲಯಗಳಿಗೆ ಪ್ರಾಧಿಕಾರ ಬೇಡ

ಬೆಂಗಳೂರು: ಮುಜರಾಯಿ ಇಲಾಖೆಗೆ ವ್ಯಾಪ್ತಿಯ ದೇವಸ್ಥಾನಗಳ ಕಾರ್ಯ ನಿರ್ವಹಿಸಲು ಪ್ರತ್ಯೇಕವಾಗಿ ಅಭಿವೃದ್ಧಿ ಪ್ರಾಧಿಕಾರ ರಚಿಸುವ ನಿರ್ಧಾರವನ್ನು ಕೈಬಿಡಬೇಕು ಎಂದು ಅಖಿಲ ಕರ್ನಾಟಕ ಹಿಂದೂ ದೇವಾಲಯಗಳ ಅರ್ಚಕರ, ಆಗಮಿಕರ ಮತ್ತು ಉಪಾಧಿವಂತರ ಒಕ್ಕೂಟ ಸರ್ಕಾರವನ್ನು ಒತ್ತಾಯಿಸಿದೆ.

ಈ ಕುರಿತು ಒಕ್ಕೂಟದ ಪ್ರಧಾನ ಸಲಹೆಗಾರ ಡಾ. ಕೆ.ಇ. ರಾಧಾಕೃಷ್ಣ ನೇತೃತ್ವದ ನಿಯೋಗ ಗುರುವಾರ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದೆ. ದೇವಾಲಯಗಳ ನಿರ್ವಹಣೆಗೆ ಪ್ರತ್ಯೇಕ ಪ್ರಾಧಿಕಾರ ರಚಿಸುವ ಬದಲು, ಅವುಗಳನ್ನು ಇಲಾಖೆ ವ್ಯಾಪ್ತಿಯಲ್ಲಿ ನಿರ್ವಹಣೆ ಮಾಡುವ ಮೂಲಕ ಅಭಿವೃದ್ಧಿ ಪಡಿಸಬೇಕು ಎಂದು ಮನವಿ ಮಾಡಲಾಯಿತು.

ಇದೇ ವೇಳೆ ಗ್ರಾಮಾಂತರ ಪ್ರದೇಶಗಳಲ್ಲಿನ 'ಸಿ' ವರ್ಗದ ದೇವಾಲಯಗಳ ತಸ್ತಿಕ್ ಮೊತ್ತವನ್ನು 5 ಸಾವಿರದಿಂದ 10 ಸಾವಿರಕ್ಕೆ ಹೆಚ್ಚಿಸಬೇಕು. 'ಎ' ಮತ್ತು 'ಬಿ' ವರ್ಗದ ದೇವಾಲಯಗಳ ಅರ್ಚಕರು



ಹಾಗೂ ನೌಕರರ ವೇತನವನ್ನು ಆಯಾ ದೇವಾಲಯಗಳ ಒಟ್ಟು ವಾರ್ಷಿಕ ವರಮಾನದ ಶೇ. 35 ಮೀರಬಾರದು ಎಂಬ ಹಳೆಯ ಆದೇಶವನ್ನು ಪರಿಷ್ಕರಿಸಿ ಶೇ. 50ಕ್ಕೆ ಹೆಚ್ಚಿಸಲು ಕ್ರಮ ಕೈಗೊಳ್ಳುವಂತೆ ಕೋರಿದರು.

ಈ ವೇಳೆ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಕೆ.ಎಸ್.ಎನ್ ದೀಕ್ಷಿತ ಹಾಗೂ ಇತರೆ ಪದಾಧಿಕಾರಿಗಳು ಇದ್ದರು.

## ಕಾಂಗ್ರೆಸ್ ಶಾಸಕ ಹರೀಶ್‌ಗೌಡಗೆ ಹನಿಟ್ರ್ಯಾಪ್ ಯತ್ನ

ತಿರುಚಿದ ಮತ್ತು ನಕಲಿ ವಿಡಿಯೋಗಳ ಮೂಲಕ ಜನಪ್ರತಿನಿಧಿಗಳು, ಉದ್ಯಮಿಗಳು ಮುಂತಾದ ಗಣ್ಯ ವ್ಯಕ್ತಿಗಳನ್ನು ಹನಿಟ್ರ್ಯಾಪ್ ಬಲೆಗೆ ಬೀಳಿಸಿ, ಹಣ ಸುಲಿಗೆ ಮಾಡುತ್ತಿದ್ದ ಇಬ್ಬರನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ. ಚಾಮರಾಜ ಕ್ಷೇತ್ರದ ಕಾಂಗ್ರೆಸ್ ಶಾಸಕ ಹರೀಶ್ ಗೌಡ ನೀಡಿದ ದೂರಿನ ಅನ್ವಯ ಪೊಲೀಸರು ಕಾರ್ಯಾಚರಣೆ ನಡೆಸಿದ್ದರು.



ಇಂದು ನಾಡಪ್ರಭು ಕೆಂಪೇಗೌಡರ ಜಯಂತಿಯ ಪ್ರಯುಕ್ತ ಕ್ಷೇತ್ರಕ್ಕೆ ಆಗಮಿಸಿರುವ ರಥವನ್ನು ಕಾರ್ಯಕರ್ತರು ಹಾಗೂ ಮುಖಂಡರೊಟ್ಟಿಗೆ ಬರಮಾಡಿಕೊಂಡರು.


ಜಗತ್ತಿನ ಯಾವುದೇ ಮೂಲೆಯಲ್ಲಿ ಕುಳಿತು ಮುಂಜಾನೆವಾರ್ತೆ ಓದಿ...

www.munjanevarthe.com

ಮುಂಜಾನೆ ವಾರ್ತೆ ಕನ್ನಡ ದಿನಪತ್ರಿಕೆ ಓದುಗುವುದು ಈಗ ಮತ್ತಷ್ಟು ಸುಲಭ

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಶುಕ್ರವಾರ 28 ಜೂನ್ 2024
FRIDAY 28 June 2024

# ಮುಖ್ಯಮಂತ್ರಿ ಸಂಚಾರಕ್ಕೆ ಅಡ್ಡಿ



ಮೈಸೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಂಚಾರಕ್ಕೆ ಅಡ್ಡಿಪಡಿಸಿದ ಬೈಕ್ ಸವಾರ, ವರುಣ ಗ್ರಾಮದ ಕುಂಬ್ರಳ್ಳಿ ನಿವಾಸಿ ಶಿವು (30) ವಿರುದ್ಧ ನಗರದ ಕೆ.ಆರ್. ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಜೂನ್ 23ರಂದು ಮುಖ್ಯಮಂತ್ರಿ ಕಾರು ಮಂಡಕಳ್ಳಿ ವಿಮಾನ ನಿಲ್ದಾಣದಿಂದ ನಜರ್‌ಬಾದ್ ಕಡೆಗೆ ಸಾಗುತ್ತಿತ್ತು.

ಕಾರು ಸಾಗುವ ಮೈಸೂರು– ನಂಜನಗೂಡು ಹೆದ್ದಾರಿಯ ರಾಜಹಂಸ ಜಂಕ್ಷನ್ ಬಳಿ ಬ್ಯಾರಿಕೇಡ್ ಅಳವಡಿಸಿ ಗನ್‌ಹೌಸ್ ರಸ್ತೆಯಿಂದ ಬರುವ ವಾಹನ ನಿಯಂತ್ರಿಸುವ ಕರ್ತವ್ಯದಲ್ಲಿ ಸಂಚಾರ ವಿಭಾಗದ ಸಿಬ್ಬಂದಿ ಅಣ್ಣಯ್ಯ ಹಾಗೂ ಉಪೇಂದ್ರ ಇದ್ದರು.

ಈ ಸಮಯದಲ್ಲಿ ಶಿವು ತನ್ನ ಯಮಹಾ ಬೈಕ್‌ನಲ್ಲಿ ಅತಿವೇಗ ಹಾಗೂ ಅಜಾಗರೂಕತೆಯಿಂದ ಬರುತ್ತಿದ್ದ. ಇದನ್ನು ಗಮನಿಸಿದ ಅಣ್ಣಯ್ಯ ಹಾಗೂ ಉಪೇಂದ್ರ ಬೈಕ್ ನಿಲ್ಲಿಸುವಂತೆ ಸೂಚಿಸಿದರೂ, ಅದನ್ನು ಲೆಕ್ಕಿಸದೆ ಅವರಿಗೆ ಡಿಕ್ಕಿ ಹೊಡೆದಿದ್ದಾನೆ. ನಂತರ ಬ್ಯಾರಿಕೇಡ್ ಭೇದಿಸಿ ಮುಖ್ಯಮಂತ್ರಿ ಕಾರು ಬರುತ್ತಿದ್ದ ವಿರುದ್ಧ ದಿಕ್ಕಿನಲ್ಲಿ ಅತಿ ವೇಗವಾಗಿ ಚಲಿಸಿ ನಂತರ ನಿಯಂತ್ರಣ ತಪ್ಪಿ ಬಿದ್ದಿದ್ದಾನೆ. ಗಾಯಗೊಂಡ ಆತನನ್ನು ಮುಖ್ಯಮಂತ್ರಿ ಕಾರಿನ ಹಿಂದೆ ಬರುತ್ತಿದ್ದ ಆಂಬುಲೆನ್ಸ್ ಮೂಲಕ ಆಸ್ಪತ್ರೆಗೆ ಸಾಗಿಸಲಾಗಿದೆ. ಪೊಲೀಸ್‌ಗೆ ಡಿಕ್ಕಿ ಹೊಡೆದು ಕರ್ತವ್ಯಕ್ಕೆ ಅಡ್ಡಿಪಡಿಸಿದ ಆರೋಪದಲ್ಲಿ ಶಿವು ವಿರುದ್ಧ ಕಾನೂನು ರೀತಿ ಕ್ರಮ ಕೈಗೊಳ್ಳುವಂತೆ ಕೆ.ಆರ್. ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಆರು ವರ್ಷದ ಮೊಮ್ಮಗಳ ಮೇಲೆ ತಾತನಿಂದ ಅತ್ಯಾಚಾರ!

ಪೋಷಕರು ಮನೆಯಲ್ಲಿ ಇಲ್ಲದ ಸಮಯದಲ್ಲಿ ತಾತನೊಬ್ಬ ಆರು ವರ್ಷದ ಮೊಮ್ಮಗಳ ಮೇಲೆ ಅತ್ಯಾಚಾರ ಎಸಗಿದ ಅಮಾನವೀಯ ಘಟನೆ ಬೆಂಗಳೂರಿನ ಬನ್ನೇರುಘಟ್ಟ ರಸ್ತೆಯ ಹುಳಿಮಾವು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ತಾಯಿ ಕೆಲಸಕ್ಕೆ ಹೋದ ಸಮಯದಲ್ಲಿ ಅಜ್ಜ ತನ್ನ ಮೊಮ್ಮಗಳ ಮೇಲೆ ಅತ್ಯಾಚಾರ ಎಸಗಿರುವುದು ಬೆಳಕಿಗೆ ಬಂದಿದೆ. ಈ ವಿಷಯ ಯಾರಿಗೂ ಹೇಳದಂತೆ ಅಜ್ಜ ಮಗುವಿನ



ತಾಯಿ (ಸೊಸೆ)ಗೆ ಆಮಿಷ ಒಡ್ಡಿದ್ದಾನೆ. ಆದರೆ ಮಗುವನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ಕರೆದೊಯ್ದಾಗ ಪ್ರಕರಣ ಬೆಳಕಿಗೆ ಬಂದಿದೆ. ಸದ್ಯ ಬಾಲಕಿಗೆ ವಾಣಿವಿಲಾಸ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.ಪ್ರಸ್ತುತ ಈ ಕುಟುಂಬ ಹುಳಿಮಾವಿನ ವೇಣುಗೋಪಾಲ ನಗರದಲ್ಲಿ ವಾಸವಿದೆ. ಬಾಲಕಿಯ ತಂದೆ ರಂಜಿತ್ ಕುಮಾರ್ (35) ನನ್ನು ಪೊಲೀಸರು ಬಂಧಿಸಿದ್ದಾರೆ. ರಂಜಿತ್ ಕುಮಾರ್ ತಂದೆ ಚಕ್ರವರ್ತಿ (60), ಅತ್ತೆ ವಿಜಯಮ್ಮ (50) ಹಾಗೂ ಇಬ್ಬರು ಸಹೋದರರು ತಲೆಮರೆಸಿಕೊಂಡಿದ್ದಾರೆ. ವಿಚಾರ ಗೊತ್ತಾಗುತ್ತಿದ್ದಂತೆ ಆರೋಪಿ ಅಜ್ಜ ಚಕ್ರವರ್ತಿ ಮನೆಯಿಂದ ಎಸ್ಕೇಪ್ ಆಗಿದ್ದಾನೆ. ಈ ಹೇಯ ಕೃತ್ಯ ಮಗುವಿನ ಅಜ್ಜನಿಂದಾಗಿದೆ ಎಂದು ತಿಳಿದು ಕೂಡ ಮಗುವಿನ ತಂದೆ ತನ್ನ ತಂದೆಗೆ (ಚಕ್ರವರ್ತಿ) ಪಾರಾರಿಯಾಗಲು ಸಹಾಯ ಮಾಡಿದ್ದಾನೆ. ಬಂಗಾರದ ಆಸೆಗೆ ಮಗುವಿನ ತಂದೆ ಈ ವಿಷಯವನ್ನು ಎಲ್ಲೂ ಕೂಡ ಬಾಯಿ ಬಿಟ್ಟಿಲ್ಲ. ಮಗುವಿನ ತಾಯಿ ಆಸ್ಪತ್ರೆಗೆ ಮಗುವನ್ನು ಕರೆತಂದಾಗ ಈ ವಿಷಯ ಬೆಳಕಿಗೆ ಬಂದಿದೆ. ಆರು ವರ್ಷದ ಮಗಳ ಮೇಲೆ ಅತ್ಯಾಚಾರ ಎಸಗಲಾಗಿದೆ ಎಂದು ಪೋಷಕರಿಗೆ ಗೊತ್ತಾಗಿದೆ. ಆದರೂ ಅಜ್ಜ ತನ್ನ ಆಸ್ತಿಯನ್ನು ಬರೆದುಕೊಡುವುದಾಗಿ ಹೇಳಿ, ಆಮಿಷ ಒಡ್ಡಿ ಬಾಯಿ ಮುಚ್ಚಿಸಿದ್ದಾನೆ. ಮಗುವಿನ ತಂದೆಗೆ ತನ್ನ ಸ್ವಂತ ಕಂದಮ್ಮನ ಮೇಲೆ ಇಂತಹ ಹೇಯ ಕೃತ್ಯ ಎಸಗಿರುವುದು ಗೊತ್ತಾದರೂ ಹಣ ಹಾಗೂ ಆಸ್ತಿ ಆಸೆಗೆ ಸುಮ್ಮನಾಗಿದ್ದಾನೆ. ಆದರೆ ತಾಯಿ ಹೃದಯ ಇದನ್ನು ಸಹಿಸಿಲ್ಲ. ಕೂಡಲೆ ತಾನು ಕೆಲಸಕ್ಕೆ ಹೋಗುವುದಾಗಿ ಹೇಳಿ ಮನೆಯಿಂದ ಮಗುವನ್ನು ಕರೆದುಕೊಂಡು ಆಸ್ಪತ್ರೆಗೆ ಚಿಕಿತ್ಸೆಗಾಗಿ ಕರೆದುಕೊಂಡು ಹೋಗಿದ್ದಾಳೆ. ಆಗ ಈ ಘಟನೆ ಬಹಿರಂಗವಾಗಿದ್ದು ಮನುಕುಲವೇ ತಲೆ ತಗ್ಗಿಸಿದೆ. ಮಗುವಿಗೆ ಚಿಕಿತ್ಸೆ ಕೊಡಿಸಲು ಆಸ್ಪತ್ರೆಗೆ ಹೋದಾಗ ಮಗುವಿನ ಸ್ಥಿತಿ ಕಂಡು ಆಸ್ಪತ್ರೆ ವೈದ್ಯರಿಗೆ ಅನುಮಾನ ಬಂದಿದೆ. ಅವರು ಜೋರಾಗಿ ಪೋಷಕರಿಗೆ ಪ್ರಶ್ನೆ ಮಾಡಿದಾಗ ತಾಯಿ ಧೈರ್ಯ ಮಾಡಿ ಎಲ್ಲಾ ವಿಷಯವನ್ನು ಹೇಳಿಕೊಂಡಿದ್ದಾಳೆ. ಅಲ್ಲದೆ ಮಗುವನ್ನು ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಿಸಿದ ಕೂಡಲೇ ಸ್ಥಳೀಯ ಅಕ್ಕಪಕ್ಕದವರ ಸಹಾಯ ಪಡೆದು ಪೊಲೀಸರಿಗೆ ಮಾಹಿತಿ ನೀಡಲಾಗಿದೆ. ಬಳಿಕ ಪೊಲೀಸರು ಸ್ಥಳಕ್ಕೆ ಆಗಮಿಸಿ ದೂರು ದಾಖಲಿಸಿಕೊಂಡಿದ್ದಾರೆ. ಹುಳಿಮಾವು ಪೊಲೀಸ್ ಠಾಣೆಯಲ್ಲಿ ಪೋಕ್ಸೋ ಕೇಸ್ ದಾಖಲಾಗಿದೆ. ಆರೋಪಿ ಕುಟುಂಬಸ್ಥರು ಮೂಲತ: ತಮಿಳುನಾಡು ಮೂಲದವರು. ಬಾಲಕಿ ತಾಯಿ ನೀಡಿದ ದೂರಿನ ಆಧಾರದ ಮೇಲೆ ಮಗುವಿನ ತಂದೆ ಹಾಗೂ ಅಜ್ಜನ ವಿರುದ್ಧ ದೂರು ದಾಖಲಿಸಿಕೊಂಡ ಪೊಲೀಸರು ವಿಚಾರಣೆ ಆರಂಭಿಸಿದ್ದಾರೆ. ಇನ್ನು ಮೊಮ್ಮಗಳ ಮೇಲೆ ಅತ್ಯಾಚಾರ ಎಸಗಿದ ತಾತ ಸಹಾಯ ಮಾಡಿದ ಅಜ್ಜಿ ಹಾಗೂ ಮನೆಯಲ್ಲಿದ್ದ ಚಿಕ್ಕಪ್ಪಂದಿರು ತಲೆ ಮರೆಸಿಕೊಳ್ಳಲು ಬಾಲಕಿಯ ತಂದೆಯೇ ಸಹಾಯ ಮಾಡಿದ್ದಾನೆ ಎಂದು ವಿಚಾರಣೆ ವೇಳೆ ತಿಳಿದು ಬಂದಿದೆ.

# ಬೆಂಗಳೂರನ್ನು ಸುಸಜ್ಜಿತ ಮಹಾನಗರವನ್ನಾಗಿ ಕಟ್ಟಲು ಕೆಂಪೇಗೌಡರ ಕೊಡುಗೆ ಅಪಾರ : ಜಿಲ್ಲಾಧಿಕಾರಿ ಶಿಲ್ಪಾ ನಾಗ್

ಚಾಮರಾಜನಗರ,ವಿಶ್ವಪ್ರಸಿದ್ಧ ಬೆಂಗಳೂರನ್ನು ಸಣ್ಣ ಪಟ್ಟಣದಿಂದ ಸುಸಜ್ಜಿತ ಮಹಾನಗರವನ್ನಾಗಿ ಕಟ್ಟಲು ನಾಡಪ್ರಭು ಕೆಂಪೇಗೌಡ ಅವರ ಕೊಡುಗೆ ಅಪಾರವಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಅಭಿಪ್ರಾಯಪಟ್ಟರು.

ನಗರದ ವರನಟ ಡಾ. ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ ನಾಡಪ್ರಭು ಕೆಂಪೇಗೌಡ ಅವರ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭಾರತ ಮಾತ್ರವಲ್ಲ. ಇಡೀ ವಿಶ್ವಕ್ಕೆ ಪರಿಚಯವಾಗಿರುವ ಬೆಂಗಳೂರನ್ನು ಕಟ್ಟಿದ ನಾಡಪ್ರಭು ಕೆಂಪೇಗೌಡ ಅವರದ್ದು ಸರ್ವಶ್ರೇಷ್ಠ ವ್ಯಕ್ತಿತ್ವ. ಕೆಂಪೇಗೌಡರು ದಾರ್ಶನಿಕ, ಅಪ್ರತಿಮ ಹಾಗೂ ದಕ್ಷ ಆಡಳಿತಗಾರರು ಆಗಿದ್ದರು. ಅವರ ಸ್ಫೂರ್ತಿಯುತ ಜೀವನ ಸಾಧನೆಯನ್ನು ಇಂದು ಎಲ್ಲರು ಅರಿಯಬೇಕಾಗಿದೆ. ಕೆಂಪೇಗೌಡರನ್ನು ಸ್ಮರಿಸುವ ಸಲುವಾಗಿ 2017ರಿಂದ ಸರ್ಕಾರದ ವತಿಯಿಂದ ಜಯಂತಿಯನ್ನು ಆಚರಿಸಲಾಗುತ್ತಿದೆ ಎಂದರು.

ಕುಡಿಯುವ ನೀರು ಹಾಗೂ ಕೃಷಿಗಾಗಿ ಅಂತರ್ಜಲ ವೃದ್ಧಿಯ ದೂರದೃಷ್ಟಿ ಚಿಂತನೆ ಹೊಂದಿದ್ದ ಕೆಂಪೇಗೌಡ ಅವರು ಬೆಂಗಳೂರಿನಾದ್ಯಂತ ಸಾಕಷ್ಟು ಕೆರೆಗಳನ್ನು ಕಟ್ಟಿಸಿದರು. ರಾಜಕಾಲುವೆಗಳನ್ನು ನಿರ್ಮಿಸಿದರು. ಸಾಮಾಜಿಕ ಸುಧಾರಣೆಗೆ ಹೆಚ್ಚು ಒತ್ತು ನೀಡಿದ್ದ ಕೆಂಪೇಗೌಡರು ಮಹಿಳೆಯರಿಗೆ ಸಮಾನ ಗೌರವಯುತ ಸ್ಥಾನಮಾನ ನೀಡಿದ್ದರು. ಇಂದಿನ ಯುವಜನರು ಕೆಂಪೇಗೌಡರ ಆದರ್ಶವನ್ನು ಅನುಸರಿಸಿ ಸಮಾಜಕ್ಕೆ ಉತ್ತಮ ಕೊಡುಗೆ ನೀಡಬೇಕು. ಅಸಹಾಯಕರಿಗೆ ಸಹಾಯಹಸ್ತ ಚಾಚಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.



ಕಾರ್ಯಕ್ರಮ ಉದ್ಘಾಟಿಸಿದ ಚಾಮರಾಜನಗರ–ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನ ಅವರು ಮಾತನಾಡಿ ಕೆಂಪೇಗೌಡ ಅವರು 500 ವರ್ಷಗಳ ಹಿಂದೆಯೇ ಬೆಂಗಳೂರು ಕಟ್ಟಲು ಅಡಿಗಲ್ಲು ಹಾಕಿದ್ದರು. ಇಂದು ಅದು ಮಾದರಿ ನಗರವಾಗಿ ಬೆಳೆದಿದೆ. ಕೆಂಪೇಗೌಡ ಅವರು ಒಂದೇ ಸಮುದಾಯಕ್ಕೆ ಸೀಮಿತ ವ್ಯಕ್ತಿಯಲ್ಲ. ಅವರು ಎಲ್ಲಾ ವರ್ಗಗಳ ಜನರ ಶ್ರೇಯೋಭಿವೃದ್ಧಿಗೆ ಆದ್ಯತೆ ನೀಡಿದ್ದರು. ಅವರ ಆಡಳಿತ ಮಾದರಿಯನ್ನು ನಾವೆಲ್ಲರು ಅಳವಡಿಸಿಕೊಳ್ಳಬೇಕು ಎಂದರು.

ಮುಖ್ಯ ಭಾಷಣ ಮಾಡಿದ ಮೈಸೂರಿನ ದಕ್ಷಿಣ ವಲಯ ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಡಾ. ಬಿ.ಸಿ. ವಿಜಯ್‌ಕುಮಾರ್ ಬಲ್ಲೇನಹಳ್ಳಿ ಅವರು ಮಾತನಾಡಿ ಬದುಕು ಪ್ರದರ್ಶನಕ್ಕಾಗಿ ಅಲ್ಲ, ನಿದರ್ಶನಕ್ಕಾಗಿ, ವಿಲಾಸಕ್ಕಲ್ಲ, ವಿಕಾಸಕ್ಕಾಗಿ ಎಂಬುದನ್ನು ಸಾಧಿಸಿ ತೋರಿಸಿದವರು ನಾಡಪ್ರಭು ಕೇಂಪೇಗೌಡ ಅವರು. ವಿಜಯನಗರದ ಸಾಮಂತ ರಾಜರಾಗಿದ್ದ ಕೆಂಪೇಗೌಡ ಅವರು ವಿಜಯನಗರದ ಮಾದರಿಯಲ್ಲಿಯೇ ಬೆಂಗಳೂರನ್ನು ಕಟ್ಟುವ ಆಶಯವನ್ನು ಹೊಂದಿದ್ದರು ಎಂದು ತಿಳಿಸಿದರು.

ಪ್ರಜೆಗಳ ಬಗ್ಗೆ ಅಪಾರ ಕಾಳಜಿ ಹೊಂದಿದ್ದ ಕೆಂಪೇಗೌಡ ಅವರು ಪಟ್ಟಣದ ಅಭ್ಯುದಯಕ್ಕಾಗಿ 3 ಸಾವಿರ ಕೆರೆಗಳನ್ನು ಕಟ್ಟಿಸಿದರು. ಸಮಾಜಮುಖಿಯಾಗಿದ್ದ ಕೆಂಪೇಗೌಡ ಅವರು ಆಡಳಿತಾತ್ಮಕ, ಸಾಮಾಜಿಕ, ಸಾಂಸ್ಕೃತಿಕ ಪರಿಕಲ್ಪನೆ ಹೊಂದಿದ್ದರು. ಎಲ್ಲಾ ಸಮುದಾಯಗಳ ಜನರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಬೆಂಗಳೂರನ್ನು ಕಟ್ಟಿದ ಕೆಂಪೇಗೌಡ ಅವರು ಜಾತ್ಯಾತೀತ ನಾಯಕರು ಹೌದು. ಸಿಲಿಕಾನ್ ಸಿಟಿ ಬೆಂಗಳೂರು ಇಂದು ವಿಸ್ತಾರವಾಗಿ ಬೆಳೆಯುತ್ತಿದೆ. ಅವರ ಸಾಮಾಜಿಕ ಪ್ರಜ್ಞೆ, ಸರ್ವಧರ್ಮ ಸಹಿಷ್ಣುತೆ ಇತರೆ ನಾಯಕರಿಗೂ ಆದರ್ಶಪ್ರಾಯವಾಗಿದೆ ಎಂದು ವಿಜಯ್‌ಕುಮಾರ್ ಬಲ್ಲೇನಹಳ್ಳಿ ಅವರು ತಿಳಿಸಿದರು.

ಸಮಾಜದ ತಾಲೂಕು ಅಧ್ಯಕ್ಷರಾದ ಪುಟ್ಟಸ್ವಾಮಿಗೌಡ ಅವರು ಕಾರ್ಯಕ್ರಮದಲ್ಲಿ ಮಾತನಾಡಿದರು.

ಇದೇ ವೇಳೆ ನಾಡಪ್ರಭು ಕೆಂಪೇಗೌಡ ಅವರ ಜೀವನ ಸಾಧನೆಗಳ ಬಗ್ಗೆ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲು ಏರ್ಪಡಿಸಿದ್ದ ಚಿತ್ರಕಲೆ, ಭಾಷಣ, ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಹಾಗೂ ಪಿ.ಯು.ಸಿ ಯಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಸ್ಮರಣಿಕೆ, ಪ್ರಮಾಣಪತ್ರ ನಗದು ಬಹುಮಾನ ನೀಡಿ ಗೌರವಿಸಲಾಯಿತು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ, ಸಮಾಜದ ಎಲ್ಲಾ ಮುಖಂಡರು, ಕನ್ನಡ ಪರ ಸಂಘಟನೆಗಳ ಮುಖಂಡರು, ಜಿಲ್ಲಾಮಟ್ಟದ ಅಧಿಕಾರಿಗಳು, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಬೆಂಗಳೂರು ನಿರ್ಮಾತೃ ಕೆಂಪೇಗೌಡರ ಕೊಡುಗೆ ಅಪಾರ: ಶಾಸಕ ಎ.ಆರ್.ಕೃಷ್ಣಮೂರ್ತಿ



ಯಳಂದೂರು. ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ತಾಲ್ಲೂಕು ಆಡಳಿತದ ವತಿಯಿಂದ ನಾಡಪ್ರಭು ಕೆಂಪೇಗೌಡರ ಜಯಂತಿಯನ್ನು ಆಚರಣೆ ಮಾಡಲಾಯಿತು.

ಪಟ್ಟಣದ ತಾಲ್ಲೂಕು ಕಚೇರಿಮುಂಭಾಗ ವೇದಿಕೆ ಕಾರ್ಯಕ್ರಮ ಆಯೋಜನೆ ಮಾಡಿ, ಕೊಳ್ಳೇಗಾಲ ಕ್ಷೇತ್ರದ ಶಾಸಕ ಎ. ಆರ್. ಕೃಷ್ಣಮೂರ್ತಿ ರವರ ಅಧ್ಯಕ್ಷತೆ ವಹಿಸಿ ಕೆಂಪೇಗೌಡರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಉದ್ಘಾಟನೆ ನಡೆಸಿದರು. ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾದ ಉಮೇಶ್ ಬೇವಿನಹಳ್ಳಿ ರವರು ಮಾತನಾಡಿ ವೇಗವಾಗಿ ಬೆಳೆಯುತ್ತಿರುವ ರಾಜ್ಯ ರಾಜ್ಯಧಾನ ಬೆಂಗಳೂರು ಇವತ್ತು ಕೋಟ್ಯಂತರ ಜನರ ಆಶ್ರಯತಾಣವಾಗಿದೆ. ಇಲ್ಲಿನವರಿಗಿಂತ ಹೆಚ್ಚು ಮಂದಿ ಹೊರಗಿನಿಂದ ಬಂದು ಇಲ್ಲಿ ತಮ್ಮ ಬದುಕನ್ನು ಕಟ್ಟಿಕೊಂಡಿದ್ದಾರೆ. ಅತ್ಯಂತ ಸುರಕ್ಷಿತ, ಸುಂದರ ಮತ್ತು ಸುಸಜ್ಜಿತ ನಗರವಾಗಿ ಬೆಂಗಳೂರು ಬೆಳೆಯಲು ಕೆಂಪೇಗೌಡ ಅವರ ವಿವೇಚನೆ ಮತ್ತು ದೂರದೃಷ್ಟಿಯೇ ಮುಖ್ಯಕಾರಣ, ಬೆಂಗಳೂರು ನಗರವನ್ನು ವ್ಯವಸ್ಥಿತವಾಗಿ ನಿರ್ಮಿಸುವಲ್ಲಿ ಕೆಂಪೇಗೌಡರು ಪ್ರಮುಖ ಪಾತ್ರ ವಹಿಸಿದ್ದರು. ಅಂದು ಅವರು ನಿರ್ಮಿಸಿದ ಬೆಂಗಳೂರು ನಗರ ಇಂದು ಬೃಹದಾಕಾರವಾಗಿ ಬೆಳೆದು ವಿಶ್ವ ಭೂಪಟದಲ್ಲಿ ಗುರುತಿಸಿ ಕೊಂಡಿದೆ, ಬೆಂಗಳೂರು ನಗರ ನಿರ್ಮಿಸಿದ ಕೆಂಪೇಗೌಡರ ಹೆಸರನ್ನು ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಇಡಲಾಗಿದ್ದು, ಕೆಂಪೇಗೌಡರ 108 ಅಡಿ ಪ್ರತಿಮೆ ಸ್ಥಾಪನೆಗೆ ಸರ್ಕಾರ ಮುಂದಾಗಿರುವುದು ಶ್ಲಾಘನೀಯ, ಕನ್ನಡ ನಾಡಿನ ಬಹುಭಾಗದಿಂದ ಹಿಡಿದು ತಮಿಳುನಾಡಿನ ಮದುರೆಯವರೆಗೂ ಆಳಿದ ಹೊಯ್ಸಳರ ದೊರೆ ಬಲ್ಲಾಳನ ಕಾಲದಿಂದಲೂ ಬೆಂಗಳೂರಿನ ಉಲ್ಲೇಖವು ನಮಗೆ ಅನೇಕ ಕಡೆಗಳಲ್ಲಿ ಸಿಗುತ್ತದೆ.

ಬೆಂಗಳೂರಿಗೆ ತಾಗಿಕೊಂಡೇ ಇರುವ ದೊಡ್ಡಬಳ್ಳಾಪುರ ಮತ್ತು ಚಿಕ್ಕಬಳ್ಳಾಪುರ ಎರಡೂ ಬಲ್ಲಾಳನ ನೆನಪಿನಲ್ಲಿ ಇರುವ ಊರುಗಳೇ ಆಗಿವೆ. ಅಂದರೆ, 'ಬಲ್ಲಾಳಪುರ' ಎನ್ನುವ ಹೆಸರೇ ಚಾಲ್ತಿಯಲ್ಲಿವೆ. ಆದರೆ, ಆ ಕಾಲಕ್ಕೆ ಈ ಊರು ಬಹುಶಃ ಒಂದು ದೊಡ್ಡ ಹಳ್ಳಿಯಾಗಿದ್ದು, ಬಹುಶಃ ಏಳೆಂಟು ಚದರ ಮೈಲಿಗಳಲ್ಲಿ ವಿಸ್ತರಿಸಿಕೊಂಡಿತೆನಿಸುತ್ತದೆ. ಹಾಗಾಗಿ ಕೆಂಪೇಗೌಡರು ಬೆಂಗಳೂರು ನಿರ್ಮಾತೃವಾಗಿ ನಾಡಿಗೆ ಕೀರ್ತಿಯನ್ನು ತಂದಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಚಂದ್ರು.ತಹಸೀಲ್ದಾರ್ ಮಂಜುಳಾ,ಮುಖ್ಯಧಿಕಾರಿ ಮಹೇಶ್ ಕುಮಾರ್,ಬಿಓ ಕಾಂತರಾಜ್, ಇಸಿಓ ಲಿಂಗರಾಜು, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ವೈ. ಎಂ. ಮಂಜುನಾಥ್,ಪಿಎಸ್‌ಐ ಹನುಮಂತ ಉಪ್ಪಾರ್,ಒಕ್ಕಲಿಗರ ಸಂಘದ ಅಧ್ಯಕ್ಷ ರಾಜುಗೌಡ, ಬನ್ನಿಸಾರಿಗೆ ರಾಜುಗೌಡ, ಆನಂದ್ ಕುಮಾರ್, ಬಾಬು,ರೇವಣ್ಣ, ಬಸವರಾಜ್, ಸತೀಶ್, ಯಜಮಾನರುಗಳು, ಮುಖಂಡರು, ಯುವಕರು ಹಾಗೂ ಸಾರ್ವಜನಕರು ಹಾಜರಿದ್ದರು.

ವರದಿ: ಆರ್.ಉಮೇಶ್ ಮಲಾರಪಾಳ್ಯ

# ಹೊಸನಗರ ತಾಲೂಕಿನ ಮಾಸ್ತಿ ಕಟ್ಟೆಯಲ್ಲಿ ಅತ್ಯಧಿಕ 118 ಮಿಲಿ ಮೀಟರ್ ಮಳೆ...!!

ಹೊಸನಗರ: ಲಿಂಗನಮಕ್ಕಿ ಜಲಾಶಯಕ್ಕೆ ನೀರು ಉಣಿಸುವ ಪ್ರಧಾನ ಜಲಾನಯನ ಪ್ರದೇಶವಾದ ಹೊಸನಗರ ತಾಲೂಕಿನ ಆದ್ಯಂತ ಅರಿದ್ರ ಮಳೆ ರಭಸದಿಂದ ಬೀಳುತ್ತಿದ್ದು ಗುರುವಾರ ಬೆಳಿಗ್ಗೆ 8 ಗಂಟೆಗೆ ಅಂತ್ಯಗೊಂಡ 24 ಗಂಟೆಗಳ ಅವಧಿಯಲ್ಲಿ ತಾಲೂಕಿನ ಮಾಸ್ತಿಕಟ್ಟೆಯಲ್ಲಿ 118 ಮಿಲಿ ಮೀಟರ್ ಮಳೆ ದಾಖಲಾಗಿರುತ್ತದೆ. ಹುಲಿಕಲ್ಲಿನಲ್ಲಿ 117 ಯಡೂರಿನಲ್ಲಿ 86 ಮಾಣಿಯಲ್ಲಿ 74 ಬಿದನೂರು ನಗರದಲ್ಲಿ 64 ಹೊಸನಗರದಲ್ಲಿ 57 ಮಿಲಿ ಮೀಟರ್ ಮಳೆ ಬಿದ್ದಿರುತ್ತದೆ. ಲಿಂಗನಮಕ್ಕಿ ಜಲಾಶಯದಲ್ಲಿ ಕಳೆದ ಬಾರಿಗಿಂತ ಏಳು ಅಡಿ ನೀರು ಹೆಚ್ಚು



ಸಂಗ್ರಹವಾಗಿದ್ದು ಇಂದು ಬೆಳಿಗ್ಗೆ 8: ಗಂಟೆಗೆ ಜಲಾಶಯದ ನೀರಿನ ಮಟ್ಟ 1747.60 ಅಡಿ ತಲುಪಿದ್ದು ಜಲಾಶಯಕ್ಕೆ 16984 ಕ್ಯೂಸೆಕ್ಸ್ ನೀರು ಹರಿದು ಬರುತ್ತಿದೆ ಕಳೆದ ವರ್ಷ ಇದೆ ಅವಧಿಗೆ ಜಲಾಶಯದ ನೀರಿನ ಮಟ್ಟ1740.20 ಅಡಿ ದಾಖಲಾಗಿತ್ತು.

# ರಾಜ್ಯ ಸರ್ಕಾರ ಕೆಂಪೇಗೌಡ ಜಯಂತಿ ಹೆಸರಿನಲ್ಲಿ ದ್ವೇಷದ ರಾಜಕಾರಣ ಮಾಡುತ್ತಿದೆ

ಕೆ.ಆರ್.ಪೇಟೆ: ರಾಜ್ಯ ಸರ್ಕಾರ ಕೆಂಪೇಗೌಡ ಜಯಂತಿ ಹೆಸರಿನಲ್ಲಿ ದ್ವೇಷದ ರಾಜಕಾರಣ ಮಾಡುತ್ತಿದೆ ಎಂದು ಅಕ್ಕಿಹೆಬ್ಬಾಳು ಹೋಬಳಿಯ ಜೆಡಿಎಸ್ ಅಧ್ಯಕ್ಷ ಬಸವಲಿಂಗಪ್ಪ ಹೇಳಿದರು. ರಾಜ್ಯ ಸರಕಾರ ಬೆಂಗಳೂರಿನಲ್ಲಿ ಆಯೋಜಿಸಿರುವ ನಾಡಪ್ರಭು ಕೆಂಪೇಗೌಡರ 515ನೇ ಜಯಂತಿ ಆಚರಣೆ ಕಾರ್ಯಕ್ರಮಕ್ಕೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರಿಗೆ ಆಹ್ವಾನ ನೀಡಿಲ್ಲವೆಂದು ಆರೋಪಿಸಿ. ತಾಲ್ಲೂಕಿನ



ಅಕ್ಕಿಹೆಬ್ಬಾಳು ಹೋಬಳಿಯ ಬೀರುವಳ್ಳಿ ಗ್ರಾಮದಲ್ಲಿ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಮಾತನಾಡಿದರು. ಪ್ರಧಾನಿ ಹುದ್ದೆ ಅಲಂಕರಿಸಿದ ಏಕೈಕ ಕನ್ನಡಿಗ ದೇವೇಗೌಡರು ಅವರ ಅಧಿಕಾರದ ಅವಧಿಯ ಕಾಲಘಟ್ಟದಲ್ಲಿ ದೇಶದ ರೈತರು, ಕಾರ್ಮಿಕರು, ಸೇರಿದಂತೆ ದುಡಿಯುವ ಶ್ರಮಿಕ ವರ್ಗದ ಪರವಾಗಿ ಸುದೀರ್ಘ ನಿಲ್ಲುವ ಮೂಲಕ ಎಲ್ಲಾ ವರ್ಗದ ಜನತೆ ಸಾಮಾಜಿಕ ನ್ಯಾಯ ಕಲ್ಪಿಸುವಂತಹ ಪರಿಕಲ್ಪ ಹಾಗೂ ಅಲ್ಪಸಂಖ್ಯಾತರು, ಹಿಂದುಳಿದ ವರ್ಗಗಳು, ಪರಿಶಿಷ್ಟ ಜಾತಿ ಮತ್ತು ಪಂಗಡಗಳು ಮತ್ತು ಮಹಿಳೆಯರು ಹೀಗೆ ಎಲ್ಲರಿಗೂ ಸಮಾನತೆಯಿಂದ ಲಾಭ ಸಿಗುವಂತೆ ಮೀಸಲಾತಿ ಯೋಜನೆಯನ್ನು ಜಾರಿಗೆತಂದು. ರೈತರ ಪಾಲಿನ ಶಾಶ್ವತ ಪ್ರಧಾನಿಯಾಗಿರುವ ಅವರ ಹೆಸರನ್ನು ಆಹ್ವಾನ ಪತ್ರಿಕೆಯಲ್ಲಿ ಮುದ್ರಿಸಿಲ್ಲ ಹಾಗೂ ಅವರಿಗೆ ಆಹ್ವಾನ ಸಹ ನೀಡಿಲ್ಲ. ಹಾಗೆಯೇ ಎರಡು ಬಾರಿ ಮುಖ್ಯಮಂತ್ರಿಯಾಗಿ ಸದ್ಯ ಕೇಂದ್ರ ಸರಕಾರದಲ್ಲಿ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವರಾಗಿರುವ ಹೆಚ್.ಡಿ. ಕುಮಾರಸ್ವಾಮಿ ಅವರನ್ನೂ ಆಹ್ವಾನಿಸಿಲ್ಲ, ಆಹ್ವಾನ ಪತ್ರಿಕೆಯಲ್ಲೂ ಅವರ ಹೆಸರು ಮುದ್ರಿತವಾಗಿಲ್ಲ. ಸರ್ಕಾರ ಕೇವಲ ತಮ್ಮ ಪಕ್ಷಕ್ಕೆ ನಿಷ್ಠರಾಗಿರುವವರನ್ನು ಆಹ್ವಾನ ಪತ್ರಿಕೆಯಲ್ಲಿ ಮುದ್ರಿಸುವ ಮೂಲಕ ಕ್ಷುಲ್ಲಕ ಕೀಳುಮಟ್ಟದ ರಾಜಕೀಯ ಎಂದು ಆರೋಪಿಸಿ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಈ ಸಂದರ್ಭದಲ್ಲಿ ಗ್ರಾ.ಪಂ ಮಾಜಿ ಅಧ್ಯಕ್ಷ ಹಾಗೂ ಹಾಲಿ ಸದಸ್ಯ ಬಿ. ಎನ್ ಕುಮಾರ್,ಬೀರುವಳ್ಳಿ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಲಕ್ಷ್ಮೀಗೌಡ,ಶಿವರಾಮೇಗೌಡ, ವೆಂಕಟೇಶ್ ಗೌಡ, ಪರುಶುರಾಮ್,ನಂಜೇಗೌಡ,ಶೋಭಿತ್, ರಾಮಕೃಷ್ಣ, ಚಂದ್ರೇಗೌಡ, ಮಹದೇವ್, ಶ್ರೀನಿವಾಸ್, ಧರಣೇಶ್, ಮಹೇಶ್, ಕೃಷ್ಣ, ಇತರರಿದ್ದರು.

ಸುದ್ದಿಯೊಂದಿಗೆ ಮನು ಮಾಕವಳ್ಳಿ ಕೆಆರ್‌ಪೇಟೆ

# ಕೆಂಪೇಗೌಡರು ಸರ್ವಜನರ ಶ್ರೇಯಸ್ಸಿಗಾಗಿ ದುಡಿದ ಮಹಾನ್ ಮಾನವತಾವಾದಿಗಳು

ಮಾಲೂರು: ತೊರ್ನಹಳ್ಳಿಯ ರಮಾ ಮಾಧವ ಪ್ರೌಢಶಾಲೆಯಲ್ಲಿ ನಾಡಪ್ರಭು ಕೆಂಪೇಗೌಡರ 515ನೇ ಜಯಂತಿಯನ್ನು ಅರ್ಥಪೂರ್ಣವಾಗಿ ಅಚರಿಸಲಾಯಿತು. ನಾಡಪ್ರಭುಗಳು ಬೆಂಗಳೂರಿನ ನಿರ್ಮಾತೃ, ಅಪ್ರತಿಮ ಆಡಳಿತಗಾರರಷ್ಟೇ ಆಗಿರಲಿಲ್ಲ, ಅವರೊಬ್ಬರು ಅನನ್ಯ ದಾರ್ಶನಿಕರು,



ಶಾಂತಿಪ್ರಿಯರು, ಸರ್ವಜನರ ಶ್ರೇಯಸ್ಸಿಗಾಗಿ ದುಡಿದ ಮಹಾನ್ ಮಾನವತಾವಾದಿಗಳು ಎಂದು ಮುಖ್ಯಶಿಕ್ಷಕಿ ಪಿ.ಜಿ.ವಿದ್ಯಾಧರಿ ರವರು ತಿಳಿಸಿದರು. ಮಾಲೂರು ತಾಲ್ಲೂಕಿನ ಕಸಬಾ ಹೋಬಳಿಯ ತೊರ್ನಹಳ್ಳಿ ಗ್ರಾಮದ ರಮಾ ಮಾಧವ ಪ್ರೌಢ ಶಾಲೆಯಲ್ಲಿ ಹಮ್ಮಿಕೊಂಡಿದ್ದ 515ನೇ ಜಯಂತಿಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು

ಕೆಂಪೇಗೌಡರ ಕನಸಿನ ನಗರವಾಗಿರುವ ಬೆಂಗಳೂರು ಇಂದು ಎಲ್ಲಾ ಸಮುದಾಯಗಳ ಶಾಂತಿಯ ತೋಟವಾಗಿದೆ. ಕೆಂಪೇಗೌಡರನ್ನು ಸ್ಮರಿಸುವ ನಿಟ್ಟಿನಲ್ಲಿ ಅವರ ಜಯಂತಿ ಕಾರ್ಯಕ್ರಮವನ್ನು ಎಲ್ಲೆಡೆ ಆಚರಿಸಲಾಗುತ್ತಿದೆ ಎಂದರು. ಈ ಸಂದರ್ಭದಲ್ಲಿ ವಿದ್ಯಾರ್ಥಿಗಳು ಕೆಂಪೇಗೌಡರ ಜೀವನ ಮತ್ತು ಸಾಧನೆಗಳನ್ನು ಕುರಿತು ಭಾಷಣ ಮಾಡಿದರು. ಹಾಗೆಯೇ ವಿದ್ಯಾರ್ಥಿಗಳಿಗೆ ಗೇರುಪುರದ ಅಂಜೀಗೌಡರು ವಿದ್ಯಾರ್ಥಿಗಳಿಗೆ ಸಿಹಿಯನ್ನು ವಿತರಿಸಿದರು. ಈ ಸಂದರ್ಭದಲ್ಲಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಮುಖ್ಯೋಪಾಧ್ಯಾಯರಾದ ಪಿ.ಜಿ.ವಿದ್ಯಾಧರಿ, ದೈಹಿಕ ಶಿಕ್ಷಣ ಶಿಕ್ಷಕ ಜಿ.ಸಿ.ವೆಂಕಟಸ್ವಾಮಿ, ಶಿಕ್ಷಕರಾದ ಕೃಷ್ಣಮೂರ್ತಿ, ನಾಗರಾಜ್, ಸಾಗರ್.ಬಿ.ಎಲ್, ಲೇಖನ.ಎಂ, ಸೌಂದರ್ಯ ಸಿಬ್ಬಂದಿ ರಾಜಶೇಖರ್ ಹಾಗೂ ವಿದ್ಯಾರ್ಥಿಗಳು ಇದ್ದರು.

ವರದಿ: ಗೋಪಾಲಕೃಷ್ಣ, ಕೋಲಾರ

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಶುಕ್ರವಾರ 28 ಜೂನ್ 2024
FRIDAY 28 June 2024

# ಅಂಗನವಾಡಿ ಕಾರ್ಯಕರ್ತರ ಪ್ರತಿಮೆ ಸೇವೆ ಸ್ಮರಿಸಿದ ಶಾಸಕ ಬೇಳೂರು ಗೋಪಾಲಕೃಷ್ಣ...



ಹೊಸನಗರ: ಕೊರೋನ ಕಾಲದಲ್ಲಿ ಸೈನಿಕರಂತೆ ಧೃತಿಗೆಡದೆ ಅಪ್ರತಿಮ ಸೇವೆ ಸಲ್ಲಿಸಿದ ಅಂಗನವಾಡಿ ಕಾರ್ಯಕರ್ತರ ಸೇವೆಯನ್ನು ಸ್ಮರಿಸಿದ ಶಾಸಕ ಬೇಳೂರು ಗೋಪಾಲಕೃಷ್ಣ ರವರು ಇಂದು ಪಟ್ಟಣದ ಈಡಿಗ ಸಭಾಭವನದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆ ಸಂಯುಕ್ತ ಆಶ್ರಯದಲ್ಲಿ ಪೋಶನ್ ಅಭಿಯಾನ ಯೋಜನೆಯಡಿ ಅಂಗನವಾಡಿ ಕಾರ್ಯಕರ್ತೆಯರಿಗೆ ಹಾಗೂ ಮೇಲ್ವಿಚಾರಕರಿಗೆ ಸ್ಮಾರ್ಟ್ ಫೋನ್ ವಿತರಿಸಿ ಮಾತನಾಡಿ ಇದೀಗ ಹೆಚ್ಚುವರಿಯಾಗಿ ಎಲ್ ಕೆ ಜಿ ಹಾಗೂ ಯುಕೆಜಿ ಮಕ್ಕಳ ಪೋಷಣೆ ಹಾಗೂ ಸಂರಕ್ಷಣೆಯ ಜವಾಬ್ದಾರಿಯನ್ನು ಸರ್ಕಾರ ನೀಡಿದ್ದು ಈ ಜವಾಬ್ದಾರಿಯನ್ನು ಅಂಗನವಾಡಿ ಕಾರ್ಯಕರ್ತರು ಸಮಗ್ರವಾಗಿ ಪೂರೈಸುವ ಭರವಸೆ ನನಗಿದೆ ಎಂದು ಹೇಳಿದ ಶಾಸಕರು ತಮ್ಮ ಸೇವೆಯಲ್ಲಿ ಏನಾದರೂ ಕುಂದು ಕೊರತೆ ಉಂಟಾದಲ್ಲಿ ನಮ್ಮ ಗಮನಕ್ಕೆ ತರಬೇಕೆಂದು ಅಭಯ ನೀಡಿದರು.ಈ ಸಂದರ್ಭದಲ್ಲಿ ತಾಲೂಕು ದಂಡಾಧಿಕಾರಿಗಳು ತಹಶೀಲ್ದರಾದ ಶ್ರೀಮತಿ ರಶ್ಮಿ ಹಾಲೇಶ್ ಅಧ್ಯಕ್ಷತೆ ವಹಿಸಿದ ಸಮಾರಂಭದಲ್ಲಿ ತಾಲೂಕು ಆರೋಗ್ಯ ಅಧಿಕಾರಿ ಆಡಿ ಸುರೇಶ್ ಅಂಗನವಾಡಿ ಕಾರ್ಯಕರ್ತರ ರಾಜ್ಯ ಸಂಚಾಲಕ ರವೀಂದ್ರ ಸಾಗರ್ ವೃತ್ತ ಆರಕ್ಷಕ ನಿರೀಕ್ಷಕ ಗುರಣ್ಣ ಎಸ್ ಹೆಬ್ಬಾಳ ಮುಖ್ಯ ಅತಿಥಿ ಗಳಾಗಿ ಪಾಲ್ಗೊಂಡಿದ್ದರು.ಶ್ರೀಮತಿ ವೀಣಾ ಮಂಜುನಾಥ್ ಪ್ರಾರ್ಥಿಸಿದರು ಶಿಶು ಅಭಿವೃದ್ಧಿ ಯೋಜನೆ ಹಿರಿಯ ಮೇಲ್ವಿಚಾರಕಿ ಓ ವೀರಮ್ಮ ಸ್ವಾಗತಿಸಿದರು.

ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸಿ ಸುರೇಶ್ ಪ್ರಾಸ್ತಾವಿಕ ಭಾಷಣ ಮಾಡಿ ಯೋಜನೆಯ ವಿವರ ಸ್ಮಾರ್ಟ್ ಫೋನ್ ಬಳಕೆ ಬಗ್ಗೆ ವಿವರಿಸಿದರು ದಿವ್ಯ ಹಾಗೂ ಸುಜಾತ ಕಾರ್ಯಕ್ರಮ ನಿರೂಪಿಸಿದರು ಮೇಲ್ವಿಚಾರಕಿ ಶ್ರೀಮತಿ ವನಮಾಲಾ ವಂದಿಸಿದರು ಶಾಸಕರು ಹಾಗೂ ಮುಖ್ಯ ಅತಿಥಿಗಳು ಅಂಗನವಾಡಿ ಕಾರ್ಯಕರ್ತರಿಗೆ ಸ್ಮಾರ್ಟ್ಫೋನ್ ಹಾಗೂ ಆರೋಗ್ಯಕಿಟ್ ವಿತರಿಸಿದರು.

# ಶ್ರೀ ಎಚ್ಎಸ್ ಪಾಟೀಲ ಆಂಗ್ಲ ಮಾಧ್ಯಮ ಶಾಲೆ ಉದ್ಘಾಟನೆ



ಮುಂಜಾನೆ ವಾರ್ತೆ ಸುದ್ದಿ ತಾಳಿಕೋಟಿ: ಪಟ್ಟಣದ ಶ್ರೀ ಎಚ್ಎಸ್ ಪಾಟೀಲ ಆಂಗ್ಲ ಮಾಧ್ಯಮ ಶಾಲೆಯ ಉದ್ಘಾಟನೆ ಹಾಗೂ 2024 25 ನೇ ಸಾಲಿನ ವಿದ್ಯಾರ್ಥಿಗಳಿಗೆ ಸ್ವಾಗತ ಕೋರುವ ಕಾರ್ಯಕ್ರಮ ಗುರುವಾರ ಜರುಗಿತು. ಸಮಾರಂಭ ಉದ್ಘಾಟಿಸಿ ಮಾತನಾಡಿದ ರಾಜ ಯೋಗಿನಿ ಬ್ರಹ್ಮಕುಮಾರಿ ಯಮುನಾಜಿ ಅಕ್ಕನವರು ವಿದ್ಯಾರ್ಥಿಗಳು ಶಿಕ್ಷಣದೊಂದಿಗೆ ಉತ್ತಮ ಮೌಲ್ಯಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಶಿಕ್ಷಣದೊಂದಿಗೆ ಸಂಸ್ಕಾರಗಳನ್ನು ಕಲಿಯುವುದು ಅತ್ಯಗತ್ಯವಾಗಿದೆ. ಸಂಸ್ಕಾರ ಇಲ್ಲದ ಶಿಕ್ಷಣಕ್ಕೆ ಯಾವ ಮಹತ್ವವು ಇಲ್ಲ ಎಂದರು.

ವಿಶೇಷ ಉಪನ್ಯಾಸಕರಾಗಿ ಆಗಮಿಸಿದ ಬಾಗೇಶ್ ಬಿ ಮುರಡಿ ಅವರು ತಮ್ಮ ಹಸಿಬರ್ತಿ ಶೈಲಿಯಲ್ಲಿ ವಿದ್ಯಾರ್ಥಿಗಳಿಗೆ ಶಿಕ್ಷಣದ ಮಹತ್ವದ ಉದ್ದೇಶ ಹಾಗೂ ಶ್ರೇಷ್ಠ ಗುರಿ ಸಾಧನೆಗೆ ಯಾವ ರೀತಿಯಾಗಿ ಪ್ರಯತ್ನಿಸಬೇಕು ಎಂಬುದರ ಕುರಿತು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ದೇವರಾಜ್ ಬಾಗೇವಾಡಿ ಹಾಗೂ ಸಾಗರ್ ಅವರು ವಿದ್ಯಾರ್ಥಿಗಳಿಗೆ ಓದಿನ ಮಹತ್ವದ ಕುರಿತು ತಿಳಿಸಿದರು. ಸಮಾರಂಭದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷರಾದ ಎಚ್ಎಸ್ ಪಾಟೀಲ್ ಅವರು ವಹಿಸಿದ್ದರು. ಶ್ರೀ ಖಾಸ್ಗತೇಶ್ವರ ಮಠದ ಪೂಜ್ಯಶ್ರೀ ಸಿದ್ದಲಿಂಗ ದೇವರು ಹಾಗೂ ಇರೂರಿನ ಪೂಜ್ಯಶ್ರೀ ಜಯಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಸಮಾರಂಭದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ವೇದಿಕೆಯಲ್ಲಿ ಪಿಎಸ್ಐ ಆರ್.ಎಸ್.ಭಂಗಿ. ಹಿರಿಯ ಪತ್ರಕರ್ತ ಜಿ.ಟಿ. ಗೋರ್ಪಡೆ. ಶ್ರೀಮತಿ ಮೀರಾ ದೇಶಪಾಂಡೆ.

ನಿರ್ದೇಶಕ ನಯ್ಯಮ. ಶಿಕ್ಷಣ ಸಂಯೋಜಕ ಸುರೇಶ್ ಹಿರೇಮಠ. ಕಾಶಿನಾಥ್ ಸಜ್ಜನ.ಸಿಆರ್ಸಿ ರಾಜು ವಿಜಾಪೂರ ಇದ್ದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು. ಉಪನ್ಯಾಸಕ ಎಸ್ ವಿ ಜಾಮ ಗೊಂಡಿ ಸ್ವಾಗತಿಸಿದರು. ಬಿ.ಐ.ಹಿರೆಹೋಳಿ ನಿರೂಪಿಸಿದರು. ಪ್ರಕಾಶ ವಾಲೀಕಾರ ವಂದಿಸಿದರು.

ವರದಿ: ಸುನೀಲ್.ಎಲ್ ತಳವಾರ
ಮುಂಜಾನೆ ವಾರ್ತೆ ತಾಳಿಕೋಟಿ

# ಸಾಗರಕ್ಕೆ ಆದಷ್ಟು ಬೇಗ ಟ್ರಾಫಿಕ್ ಪೋಲಿಸ್ ಸ್ಟೇಷನ್



ಸಾಗರ ಪಟ್ಟಣವು ದಿನೆ ದಿನೆ ಬೆಳೆಯುತ್ತಿರುವ ಪಟ್ಟಣ ಅದಕ್ಕಾಗಿ ಸಾರ್ವಜನಿಕ ಒತ್ತಾಯದ ಮೇರೆಗೆ ಸಾಗರದಲ್ಲಿ ಆದಸ್ಟು ಬೇಗ ಟ್ರಾಫಿಕ್ ಪೋಲಿಸ್ ಠಾಣೆಯು ಮಂಜೂರು ಆಗಲಿದೆ ಎಂದು ಜಿಲ್ಲಾ ರಕ್ಷಣಾಧಿಕಾರಿ ಮಿಥುನ್ ಕುಮಾರ್ ಅವರು ಸಾಗರ ಶಾರದಾಂಬಾ ಸಭಾ ಭವನದಲ್ಲಿ ಜನಸ್ಪಂದನ ಮತ್ತು ನೊಂದವರ ಸಭೆಯಲ್ಲಿ ಮಾತಾನಾಡಿದರು..

ಸಾರ್ವಜನಿಕರ ಅನೇಕ ಪ್ರಶ್ನೆಗಳಿಗೆ ಉತ್ತರಿಸಿದರು.

ಸಾರ್ವಜನಿಕರಿಂದ ಅನೇಕ ಪ್ರಶ್ನೆಗಳನ್ನು ಎಸ್.ಪಿ.ಅವರಿಗೆ ಮನವರಿಕೆ ಮಾಡಲಾಯಿತು. ಅದರಲ್ಲಿ ಬಹು ಮುಖ್ಯವಾಗಿ ಸಾಗರದಲ್ಲಿ ಓ.ಸಿ.ಗಾಂಜಾ.ಪಡ್ಡೆ ಹುಡುಗರ ಬೈಕ್ ಚಾಲನೆ .ಇಂಟೀರಿಯರ್ ಸ್ಥಳದಲ್ಲಿ ಕುಡುಕರ ಹಾವಳಿ.ಶಾಲಾ ವಾಹನಗಳಲ್ಲಿ ಅತೀ ಹೆಚ್ಚು ಮಕ್ಕಳನ್ನು ಕರೆದು ಕೊಂಡು ಹೊಗುವುದರ ಬಗ್ಗೆ ಚರ್ಚಿಸಲಾಯಿತು ಇದಕ್ಕೆ ಸ್ಪಂದಿಸಿದ ಎಸ್.ಪಿ.ಅವರು ಇವೆಲ್ಲದರ ಕಡೆಗೆ ಹೆಚ್ಚಿನ ಗಮನ ಹರಿಸುವುದಾಗಿ ಹೇಳಿದರು .ನಂತರದಲ್ಲಿ .ಸಾಗರದ ಪೋಲಿಸ್ ಇಲಾಖೆಯು ಅತ್ಯಂತ ಪ್ರಮಾಣಕ ಕೆಲಸ ಮಾಡ್ತಾ ಬಂದಿದ್ದು ಇತ್ತೀಚೆಗೆ ಅಡಿಕೆ ಕಳ್ಳತನ ಇರಬಹುದು ಅಥವಾ ಬೇರೆ ಕಳ್ಳತನ ಇರಬಹುದು ಎಲ್ಲವನ್ನು ಕಂಡು ಹಿಡಿದು ತಕ್ಷಣವೇ ಅಪರಾಧಿಗಳನ್ನು ಹಿಡಿದು ತಕ್ಕ ಶಿಕ್ಷೆ ಕೊಟ್ಟಿದ್ದಾರೆ ಅದೇ ರೀತಿಯಲ್ಲಿಯೂ ಪತ್ರಕರ್ತರ ಮೇಲೆ ಹಲ್ಲೆ ಹಾಗೂ ಅನಾಥರ ರಕ್ಷಣೆಗು ಪೋಲಿಸ್ ಇಲಾಖೆ ಸಿದ್ಧ ವಿದೆ ಎಂದರು.....ಈಗಾಗಲೆ ಸಾಗರದ ಡಿ.ವೈ.ಎಸ್.ಪಿ ಅವರು ಪುಡಿ ಗುಂಡಾಗಳಿಗೆ ತಕ್ಕ ಶಾಸ್ತಿ ಮಾಡಿದ್ದಾರೆ ಎಂದರು..

ಈ ಸಂದರ್ಭದಲ್ಲಿ ..ಸಾಗರ ಉಪವಿಭಾಗದ ಡಿ.ವೈ.ಎಸ್.ಪಿ.ಗೋಪಾಲಕೃಷ್ಣ ನಾಯ್ಕ.ಗ್ರಾಮಾಂತರ ಠಾಣೆ ಸರ್ಕಲ್ ಇನ್ಸ್ಪೆಕ್ಟರ್ ಮಹಾಬಲೇಶ್ವರ ನಾಯ್ಕ.ನಾಗರಾಜ್.ಯಲ್ಲಪ್ಪಸಂತೋಷ ಬಾಗೋಜಿ .ಸಿದ್ಧರಾಮಪ್ಪ.ಹೊಳೆ ಬಸಪ್ಪ.ಯುವರಾಜ್ ಇನ್ನಿತರ ಪೋಲಿಸ್ ಅಧಿಕಾರಿಗಳು ಹಾಗೂ ಸಾರ್ವಜನಿಕರು ಹಾಜರಿದ್ದರು......

# ಉಚಿತ ರಕ್ತದಾನ ಶಿಬಿರ

ಕೆ.ಆರ್.ಪೇಟೆ: ನಾಡಪ್ರಭು ಕೆಂಪೇಗೌಡರ 515ನೇ ಜಯಂತೋತ್ಸವದ ಪ್ರಯುಕ್ತ ಶ್ರೀ ಸುಬ್ರಹ್ಮಣ್ಯ ಸೇವಾ ಟ್ರಸ್ಟ್ ಸಂಸ್ಥಾಪಕಧ್ಯಕ್ಷ ಹಾಗೂ ಸಮಾಜ ಸೇವಕ ಬಿ.ಎಂ.ರಣ್‌ರವರ ಅಭಿಮಾನಿ ಬಳಗದ ವತಿಯಿಂದ ಕಿಕ್ಕೇರಿ ಪಟ್ಟಣದ ಕೆಂಪೇಗೌಡ ವೃತ್ತ ಬಳಿ ಉಚಿತ ರಕ್ತದಾನ ಶಿಬಿರ ಹಾಗೂ ರೈತರಿಗೆ ತಂಗಿನ ಸಸಿ ನೀಡುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು. ಸಮಾಜ ಸೇವಕ ಬಿ.ಎಂ ಕಿರಣ್ ಅಭಿಮಾನಿ ಹಾಗೂ ಯುವ ಮುಖಂಡ ವಡಕಹಳ್ಳಿ ರಾಜೇಶ್ ಮಾತನಾಡಿ ನಮ್ಮ ನಾಯಕರಾದ ಆನೆಗೋಳ ಬಿ.ಎಂ ಕಿರಣ್ ಅವರ ಮಾರ್ಗದರ್ಶನದೊಂದಿಗೆ



ಸುಮಾರು 560 ವರ್ಷಗಳ ಹಿಂದೆಯೇ ನಾಡಪ್ರಭು ಕೆಂಪೇಗೌಡರು ಬೆಂಗಳೂರನ್ನು ನಿರ್ಮಿಸುವುದರ ಮೂಲಕ ಎಲ್ಲಾ ಜನಾಂಗದವರಿಗೂ ಸಹ ಒಂದೊಂದು ಬೀದಿಗಳನ್ನು ನಿರ್ಮಿಸಿದ್ದಾರೆ. ದೈವಭಕ್ತರಾಗಿದ್ದ ಅವರು ಸುಮಾರು 130 ದೇವಾಲಯಗಳನ್ನು ನಿರ್ಮಿಸಿದ್ದಾರೆ. ಕೆಂಪೇಗೌಡರು ಒಂದು ಜಾತಿ, ಊರಿಗೆ ಸೀಮಿತವಾಗಿಲ್ಲ ಅವರ ಆದರ್ಶವನ್ನು ನಾವೆಲ್ಲರೂ ಪಾಲಿಸಿಕೊಂಡು ಮುನ್ನಡೆಯಬೇಕು ಎನ್ನುವ ಮನೋಭಾವನೆಯಿಂದ ಉಚಿತ ರಕ್ತದಾನ ಶಿಬಿರ ಹಾಗೂ ರೈತರಿಗೆ ಸಸಿ ವಿತರಿಸಿದ್ದೇವೆ ಎಂದರು. ಬಳಿಕ ಮಾತನಾಡಿದ ಯುವ ಜನತದಳ ಕಿಕ್ಕೇರಿ ಹೋಬಳಿ ಅಧ್ಯಕ್ಷ ಕೋಳಿ ವೆಂಕಟೇಶ್ ನಾಡಪ್ರಭು ಕೆಂಪೇಗೌಡರ ಆದರ್ಶಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು. ಕೆಂಪೇಗೌಡ ಜಯಂತಿಯನ್ನು ಸಮಾಜ ಸೇವಕ ಬಿ.ಎಂ ಕಿರಣ್ ಅಭಿಮಾನಿಗಳು ವತಿಯಿಂದ ವಿಶೇಷವಾಗಿ ಆಚರಣೆ ಮಾಡುತ್ತಿರುವುದು ಸಂತಸ ತಂದಿದೆ. ಬೃಹತ್ ಬೆಂಗಳೂರು ನಗರ ನಿರ್ಮಿಸಿದ ಪ್ರಭುಗಳು ಕನ್ನಡ ನಾಡಿಗೆ ಅಭೂತಪೂರ್ವ ಕೊಡುಗೆ ನೀಡಿದ್ದಾರೆ.ಮಹನೀಯರು ಹಾಕಿಕೊಟ್ಟ ಹಾದಿಯಲ್ಲಿ ಎಲ್ಲರೂ ನಡೆಯಬೇಕು. ಇಂದಿನ ಮಕ್ಕಳು ಅವರ ಆದರ್ಶಗಳನ್ನು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕಿಕ್ಕೇರಿ ಹೋಬಳಿಯ ಜೆಡಿಎಸ್ ಉಪಾಧ್ಯಕ್ಷ ಬಾಲಚಂದ್ರಲಕ್ಷ್ಮಿಪುರ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಹಾಗೂ ಹಾಲಿ ಸದಸ್ಯ ಗಂಗೇನಹಳ್ಳಿ ರಘು (ಗುಂಡ),ಆನೆಗೂಳ ಗ್ರಾಂ ಪಂ ಮಾಜಿ ಉಪಾಧ್ಯಕ್ಷ ರಮೇಶ್,ಮುಖಂಡರಾದ ಮಾರ್ಗೋನಹಳ್ಳಿ ಮಂಜುನಾಥ್,ನವೀನ್ ಕೆ.ಬಿ, ಸಾಮಾಜಿಕ ಹೋರಾಟಗಾರ ಪೃಥ್ವಿರಾಜ್,ಗ್ರಾಂ.ಪಂ ಕಾರ್ಯದರ್ಶಿ ಮಧುಕರ್,ಬಾರೆ ಮಂಜು,ವರಡಕಹಳ್ಳಿ ಶಿವು ,ಯೋಗೀಶ್,ಬಿ.ರಾಜ್, ಅರ್ಜುನ್, ನವೀನ್ ಸೇರಿದಂತೆ ಉಪಸ್ಥಿತರಿದ್ದರು.

# ಜನರಿಗೆ ಸಂದೇಶ ನೀಡುತ್ತಿದೆ ಟ್ಯಾಬ್ಲೆಟ್ ನಾಟಕ

ಯಾದಗಿರಿ ಮುಂಜಾನೆ ವಾರ್ತೆ: ದೋರನ ಹಳ್ಳಿ ಗ್ರಾಮದ ಚಿಕ್ಕಮಠದಲ್ಲಿ ಸೃಜನಶೀಲ ಸಾಂಸ್ಕೃತಿಕ ಕಲಾ ಸಂಘದಿಂದ ಟ್ಯಾಬ್ಲೆಟ್ ನಾಟಕ ಕಾರ್ಯಕ್ರಮ. ಕಲೆ ಎಂಬುದು ಅಷ್ಟು ಸರಳವಾಗಿ ಯಾರಿಗೂ ಒಲಿಯುವುದಿಲ್ಲ. ಒಲಿದ ಮೇಲೆ ಅದು ತನ್ನಲ್ಲಿ ಅವರನ್ನು ಉಳಿಸಿ ಕೊಳ್ಳುವುದು ಬಹಳ ವಿಶೇಷ ಸಂಗತಿ ಎಂದು ಚಿಕ್ಕ ಮಠದಲ್ಲಿ ನಡೆದ ಟ್ಯಾಬ್ಲೆಟ್ ನಾಟಕ ಕಾರ್ಯಕ್ರಮದಲ್ಲಿ ಕಾರ್ಯ ನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಮಲ್ಲಿಕಾರ್ಜುನ್ ಮುದನೂರ್ ಮಾತನಾಡಿದರು.

ಶಹಾಪುರ ತಾಲೂಕಿನ ದೋರನಹಳ್ಳಿ ಗ್ರಾಮದ ಚಿಕ್ಕಮಠದಲ್ಲಿ ನಡೆದ ಸೃಜನಶೀಲ ಸಾಂಸ್ಕೃತಿಕ ಕಲಾ ಸಂಘದಿಂದ ಟ್ಯಾಬ್ಲೆಟ್ ನಾಟಕ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಕಲ್ಯಾಣ ಕರ್ನಾಟಕ ಭಾಗದಲ್ಲಿ ತುಂಬ ಕಲಾವಿದರು ಇದ್ದಾರೆ.

ಆದರೆ ಅವರಿಗೆ ಸರಕಾರ ನೀಡುವ ಸೌಲಭ್ಯಗಳಿಂದ ದೂರ ಉಳಿದಿದ್ದಾರೆ. ಆದರೆ ಅವರನ್ನು ಗುರುತಿಸುವ ಕೆಲಸವಾಗಬೇಕಿದೆ.

ಪ್ರತಿಯೊಬ್ಬರ ಜೀವನದಲ್ಲಿ ಒಂದೊಂದು ರೀತಿಯ ಕಲೆ ಹುಟ್ಟಿಕೊಂಡಿರುತ್ತದೆ ಆದರೆ ಅದನ್ನು ಹೊರ ಹಾಕುವ ಮನಸು ಮಾಡಬೇಕು ಆಗ ಮಾತ್ರ ಆ ಕಲೆಗೆ ಗೌರವ ಸಿಕ್ಕಂತೆ ಆಗುತ್ತದೆ ಎಂದು ಹೇಳೀದರು. ಕಾಮ, ಕ್ರೋದ, ಮೋಹ, ಲೋಭ, ಮದ, ಮತ್ಸರದಲ್ಲಿ ಈ ಜಗತು ಮುಳಿಗಿದೆ ಎನುವುದಕ್ಕೆ ಕಾರಣ ಈ ಮೂವತ್ತು ನಿಮಿಷದ ಟ್ಯಾಬ್ಲೆಟ್ ನಾಟಕ ಉದರಣೆಯಾಗಿದೆ ಎಂದರು, ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾಧ್ಯಕ್ಷ ಹಾಗೂ ನಾಫೆಡ್ ರಾಷ್ಟೀಯ ಉಪಾಧ್ಯಕ್ಷರು ಮಾತನಾಡಿ. ಶ್ರೀನಿವಾಸ ಕಶೆಟ್ಟಿಯವರು ಬಡವರ ಮಗನಾಗಿ ಹುಟ್ಟಿರಬಹುದು ಆದರೆ ಸಾಯುವಾಗಲು ಬಡವರ ಮಗನಾಗಿ ಸಾಯಬಾರದು. ರಂಗಯಾಣ ಮತ್ತು ನೀನಾಸಂ ತರಬೆತಿ ಮುಗಿಸಿಕೊಂಡು ದೋರನಹಳ್ಳಿ ಹಾಗೂ ಶಹಾಪೂರ ತಾಲೂಕಿನ ಹಲವಾರ ಗ್ರಾಮದ ವಿವಿಧ ಕಲಾವಿದರ ತಂಡವೊಂದನ್ನು ಮಾಡಿಕೊಂಡು. ಕಲಾಸಕ್ತರಿಗೆ ತರಬೇತಿ ನೀಡಿ ಪ್ರಶಸ್ತಿ ನೀಡುತ್ತಿರುವದು ಕಾರ್ಯ ಶ್ಲಾಘನೀಯ ಎಂದು ಹೇಳಿದರು. ಕಲ್ಯಾಣ ಕರ್ನಾಟಕ ಭಾಗದಲ್ಲಿ ನೂರಾರು ಕಲವಿದರು, ಬಾಲ ಪ್ರತಿಭೆಗಳು ಇಲ್ಲಿದ್ದಾರೆ ಅವರಿಗೆ ಸರಿಯಾದ ವೇದಿಕೆ ಕಲ್ಪಿಸುವ ಕಾರ್ಯವಾಗಬೇಕಿದೆ. ಬಡತನದಲ್ಲಿ ಹುಟ್ಟಿದ ಕಾರಣಕ್ಕೆ ಬಡವನಾಗಿಯೇ ಸಾಯಬೇಕಾ?? ಕಲವಿದರಿಗೂ ಆಸೆ,ಕನಸುಗಳು ಇರಲ್ವ ಎಂದರು. ಗ್ರಾಮ ಪಂಚಾಯತಿ ಅಧ್ಯಕ್ಷೆ ಚಂದ್ರವತಿ ದೊರೆ ಅಧ್ಯಕ್ಷತೆ ವಹಿಸಿದರು. ಪ್ರಾರ್ಥನೆ ಗೀತೆ ಬೂದಯ್ಯ ಹಿರೇಮಠ ನಡಿಸಿಕೊಟ್ಟರು. ಮಹೇಶ ಪತ್ತರ ನಿರೂಪಿಸಿ ವಂದಿಸಿದರು. ಮಹಾಂತಪ್ಪ ನಂದಿಕೋಲ್, ರಾಮು ಕಶೇಟ್ಟಿ, ಸಿದ್ದು ಸಗರ, ಅಯ್ಯಣ್ಣ ದೊರೆ,



ಮಲ್ಲು ಪೂಜಾರಿ, ಆಕಾಶ ಅಣಿಬಿ, ರಾಹುಲ್ ಹುಡೇದ್, ಗೋಲಾಳಪ್ಪ ತಳವಾರ, ಮಲ್ಲು ಶಹಾಪೂರ, ದೇವು ಶಹಾಪುರ, ಅಂಬ್ರೇಶ ಅಣಿಬಿ, ಶಂಕರನಾಗ, ಸೇರಿ ಗ್ರಾಮದ ಅನೇಕರಿದ್ದರು.

ವರದಿ: ಮಲ್ಲಿಕಾರ್ಜುನ ಕುಂಬಾರಳ್ಳಿ
ಯಾದಗಿರಿ ಜಿಲ್ಲೆ

# ತೊರ್ನಹಳ್ಳಿ ಗ್ರಾಮ ಪಂಚಾಯತಿಯಲ್ಲಿ ಅದ್ದೂರಿಯಾಗಿ 515ನೇ ಕೆಂಪೇಗೌಡ ಜಯಂತಿ ಆಚರಣೆ



ಮಾಲೂರು: ತೊರ್ನಹಳ್ಳಿ ಗ್ರಾ.ಪಂ.ಕಚೇರಿಯಲ್ಲಿ ನಾಡಪ್ರಭು ಕೆಂಪೇಗೌಡರ 515ನೇ ಜಯಂತಿ ಅಂಗವಾಗಿ ಕೇಂಪೆಗೌಡ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಪೂಜೆಯನ್ನು ಸಲ್ಲಿಸಿ ಅದ್ದೂರಿಯಾಗಿ ಆಚರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಮುಖಂಡ ಗೇರುಪುರ ಆಂಜಿ ಮಾತನಾಡಿ ನಾಡಪ್ರಭು ಕೆಂಪೇಗೌಡ ಅವರು ಬೆಂಗಳೂರು ನಗರ ನಿರ್ಮಾಣಕ್ಕೆ ಶ್ರಮಿಸಿದ್ದಾರೆ. ಅವರ ಕಾಲಘಟ್ಟದಲ್ಲಿ ಕೆರೆಗಳು ರಸ್ತೆಗಳ ಅಭಿವೃದ್ಧಿ ಸೇರಿದಂತೆ ಸಾಮಾಜಿಕ ಕಾರ್ಯಕ್ರಮಗಳಿಗೆ ಹೆಚ್ಚಿನ ಆದ್ಯತೆ ನೀಡಿದ್ದರು. ಅದರ ಫಲವಾಗಿ ಇಂದು ಬೆಂಗಳೂರು ನಗರ ಬೃಹದಕಾರವಾಗಿ ಬೆಳೆದು ಸಿಲಿಕಾನ್ ಸಿಟಿಯಾಗಿ ನಿಂತಿದೆ. ಅಂದಿನ ಕಾಲದಲ್ಲಿ ಅವರ ಸೇವೆ ಪ್ರತಿಯೊಬ್ಬರು ಸ್ಮರಿಸಬೇಕಾದದು ಪ್ರತಿಯೊಬ್ಬರ ಕರ್ತವ್ಯ. ಅವರ ವಂಶಸ್ಥರಾದ ಒಕ್ಕಲಿಗ ಸಮಾಜದವರು ತಾಲೂಕಿನ ಗ್ರಾಮಾಂತರ ಪ್ರದೇಶದಲ್ಲಿ ಒಕ್ಕಲಿಗ ಸಮಾಜದವರು ಕೃಷಿಯನ್ನು ಅವಲಂಬಿಸಿದ್ದು, ಎಲ್ಲಾ ಸಮುದಾಯಗಳನ್ನು ಒಗ್ಗಟ್ಟಾಗಿ ಕರೆದೊಯ್ಯುವ ಮೂಲಕ ಎಲ್ಲರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ ಎಂದ ಅವರು ಗ್ರಾ.ಪಂ.ವ್ಯಾಪ್ತಿಯ ಎಲ್ಲಾ ಶಾಲೆಗಳಿಗೆ ಸಿಹಿಯನ್ನು ವಿತರಣೆ ಮಾಡುತ್ತಿರುವುದಾಗಿ ಹೇಳಿದರು.

ಕಾರ್ಯಕ್ರಮದಲ್ಲಿ ಗ್ರಾ.ಪಂ.ಅಧ್ಯಕ್ಷೆ ಅಶ್ವತ್ಥಮ್ಮ ರಾಮಯ್ಯ, ಉಪಾಧ್ಯಕ್ಷೆ ನಾಗರತ್ನಮ್ಮ ವೆಂಕಟಪ್ಪ, ಎಲ್ಲಾ ಗ್ರಾಮ ಪಂಚಾಯತಿ ಸದಸ್ಯರುಗಳು, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಚಂಗಲರಾಯಗೌಡ, ಕಾರ್ಯದರ್ಶಿ, ಬಿಲ್ ಕಲೆಕ್ಟರ್ ನಾಗರಾಜ್, ಹಾಗೂ ಎಲ್ಲಾ ಗ್ರಾಮ ಪಂಚಾಯತಿ ಸಿಬ್ಬಂದಿ ಹಾಗೂ ಸಮುದಾಯದ ಮುಖಂಡರಾದ ಭಾಗವಹಿಸಿದ್ದರು.

ವರದಿ: ಗೋಪಾಲಕೃಷ್ಣ, ಕೋಲಾರ

# ನಿರಂತರವಾಗಿ ಸರಗಳ್ಳತನ ಮಾಡುತ್ತಿದ್ದ ಆರೋಪಿಯ ಕಾಲಿಗೆ ಗುಂಡೇಟು

ಮಧುಗಿರಿ:– ನಿರಂತರವಾಗಿ ಸರಗಳ್ಳತನ ಮಾಡುತ್ತಿದ್ದ ಆರೋಪಿಯ ಕಾಲಿಗೆ ಪೊಲೀಸರು ಗುಂಡು ಹಾರಿಸಿದ್ದಾರೆ. ಆಂಧ್ರದ ಹಿಂದೂಪುರ ಮೂಲದ ರಿಜ್ವಾನ್ ಎಂಬಾತನಿಗೆ ಗುಂಡೇಟು ಬಿದ್ದಿದೆ. ಮಧುಗಿರಿ ತಾಲೂಕಿನ ಈಜೀಹಳ್ಳಿ ಕ್ರಾಸ್ ಬಳಿ ಘಟನೆ ನಡೆದಿದೆ. ಆರೋಪಿ ರಿಜ್ವಾನ್ ಒಟ್ಟು 15ಕ್ಕೂ ಹೆಚ್ಚು ಸರಗಳ್ಳತನ ಪ್ರಕರಣದಲ್ಲಿ ಭಾಗಿಯಾಗಿದ್ದ. ಕಳೆದ ಒಂದು ವಾರದ ಹಿಂದೆ



ಎ1 ಆರೋಪಿ ಚಿನ್ನಾ ಎಂಬಾತನನ್ನು ಪೊಲೀಸರು ಬಂಧಿಸಿದ್ದರು. ಸೋಮವಾರ ಖಚಿತ ಮಾಹಿತಿ ಮೇರೆಗೆ ಎ2 ಆರೋಪಿ ರಿಜ್ವಾನ್‌ನನ್ನು ಬಂಧಿಸಲು ಪೊಲೀಸರು ತೆರಳಿದ್ದರು. ಮಧುಗಿರಿ ಡಿವೈಎಸ್‌ಪಿ ರಾಮಚಂದ್ರಪ್ಪ, ಸಿಪಿಐ ಹನುನಂತರಾಯಪ್ಪ, ಪಿಎಸ್‌ಐ ಶ್ರೀನಿವಾಸ್, ದಾದಪೀರ್, ಹಾಗೂ ಪೊಲೀಸ್ ಸಿಬ್ಬಂದಿ ರಮೇಶ್ ತಂಡ ತೆರಳಿತ್ತು. ಹೊಸಪೇಟೆಯಿಂದ ಪೊಲೀಸ್ ಜೀಪ್‌ನಲ್ಲಿ ಮಧುಗಿರಿಗೆ ಕರೆತರುತ್ತಿದ್ದಾಗ, ಬಹಿರ್ದೆಸೆಗೆ ಹೋಗುವುದಾಗಿ ಈಜಿಹಳ್ಳಿ ಕ್ರಾಸ್ ಬಳಿ ಇಳಿದಿದ್ದ. ಈ ವೇಳೆ ಪೊಲೀಸ್ ಪೇದೆ ರಮೇಶ್ ಮೇಲೆ ರಿಜ್ವಾನ್ ಬಿಯರ್ ಬಾಟಲ್ ಎಸೆದು ಹಲ್ಲೆ ನಡೆಸಿ, ಪರಾರಿ ಆಗಲು ಯತ್ನಿಸಿದ್ದ. ಪೊಲೀಸರು ಶರಣಾಗುವಂತೆ ಮೂರು ಬಾರಿ ಗಾಳಿಯಲ್ಲಿ ಗುಂಡು ಹಾರಿಸಿದ್ದಾರೆ. ನಂತರ ಪೊಲೀಸರ ಆತ್ಮರಕ್ಷಣೆಗಾಗಿ ಆರೋಪಿ ಕಾಲಿಗೆ ಗುಂಡು ಹಾರಿಸಿ ಬಂಧಿಸಿ ಕರೆ ತಂದಿದ್ದಾರೆ.

ಗಾಯಾಳು ಪೊಲೀಸ್ ಪೇದೆ ರಮೇಶ್: ಬಿಯರ್ ಬಾಟೆಲ್‌ನಿಂದ ಹಲ್ಲೆಗೊಳಗಾದ ಪೊಲೀಸ್ ಸಿಬ್ಬಂದಿ ರಮೇಶ್‌ಗೆ ಮಧುಗಿರಿ ತಾಲೂಕು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಆರೋಪಿ ರಿಜ್ವಾನ್‌ಗೆ ತುಮಕೂರು ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಇನ್ನೂ ರಿಜ್ವಾನ್ ಮೇಲೆ ಮಧುಗಿರಿ 3, ಮಿಡಗೇಶಿ 4, ಬಡವನಹಳ್ಳಿ 2, ಕೊರಟಗೆರೆ 1, ಕೊಡಿಗೇನಹಳ್ಳಿ 2 ಹಾಗೂ ಮಡಕಶಿರಾ 1, ಪಟ್ಟನಾಯಕನಹಳ್ಳಿ 2, ಗೌರಿಬಿದನೂರು 1 ಸೇರಿದಂತೆ ಹಲವು ಪೊಲೀಸ್ ಠಾಣೆಯಲ್ಲಿ ಪ್ರತ್ಯೇಕವಾಗಿ ದೂರು ದಾಖಲಾಗಿವೆ. ಕೊಡಿಗೇನಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ

ಆರೋಪಿ ಕಾಲಿಗೆ ಗುಂಡು ಹೊಡೆದು ಬಂಧಿಸಿದ್ದಾರೆ.

ತುಮಕೂರು ಎಸ್‌ಪಿ ಅಶೋಕ್ ಕೆ.ವಿ ಈ ಬಗ್ಗೆ ಪ್ರತಿಕ್ರಿಯಿಸಿದ್ದು, ಕಳೆದ ಎರಡು ತಿಂಗಳಿಂದ ಸುಮಾರು 18 ಸರಗಳ್ಳತನ ಆಗಿತ್ತು. ಹಳ್ಳಿಗಳಿಗೆ ಹೋಗಿ ಒಂಟಿ ಮಹಿಳೆಯರನ್ನೇ ಟಾರ್ಗೆಟ್ ಮಾಡಿ ಸರಗಳ್ಳತನ ಮಾಡುತ್ತಿದ್ದರು. ಮಧುಗಿರಿ ಡಿವೈಎಸ್‌ಪಿ ನೇತೃತ್ವದಲ್ಲಿ ಆರೋಪಿಗಳನ್ನು ಸೆರೆಹಿಡಿಯಲು ತಂಡ ರಚನೆ ಮಾಡಲಾಗಿತ್ತು. ೦1 ಆರೋಪಿ ಚಿನ್ನು ಎಂಬಾತನನ್ನು ಮೊದಲಿಗೆ ಬಂಧಿಸಲಾಗಿತ್ತು. ೦2 ಆರೋಪಿ ರಿಜ್ವಾನ್ ನಾಪತ್ತೆಯಾಗಿದ್ದ. ಆತನಿಗಾಗಿ ಹುಡುಕಾಟ ನಡೆಸಲಾಗಿತ್ತು. ಇದೀಗ ಹೊಸಕೋಟೆಯಿಂದ ಆರೋಪಿ ರಿಜ್ವಾನ್‌ನನ್ನು ಬಂಧಿಸಿ ಕರೆತರುವಾಗ ಕೊಡಿಗೇನಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯ ಈಜಿಹಳ್ಳಿ ಬಳಿ ತಪ್ಪಿಸಿಕೊಳ್ಳಲು ಯತ್ನಿಸಿದ್ದಾನೆ. ಬಿಯರ್ ಬಾಟಲ್‌ನಿಂದ ಪೊಲೀಸ್ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿ ತಪ್ಪಿಸಿಕೊಳ್ಳಲು ಯತ್ನಿಸಿದ್ದಾನೆ. ಆಗ ಮಧುಗಿರಿ ಸಿಪಿಐ ಹನುಮಂತರಾಯಪ್ಪ ಬಳಿಯಿದ್ದ ಪಿಸ್ತೂಲ್‌ನಿಂದ ಗುಂಡು ಹೊಡೆದು ಬಂಧಿಸಿದ್ದಾರೆಂದು ಮಾಹಿತಿ ಬಂದಿದೆ. ಪೊಲೀಸ್ ಸಿಬ್ಬಂದಿಯ ಎಡಗೈಗೆ ಗಾಯ ಆಗಿದ್ದು, ಮಧುಗಿರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಈಗಾಗಲೇ ಆರೋಪಿಗಳು ಕದ್ದ ಚಿನ್ನವನ್ನು ರಿಕವರಿ ಮಾಡಲಾಗಿದೆ. 500 ಗ್ರಾಂ ಚಿನ್ನವನ್ನ ರಿಕವರಿ ಮಾಡಲಾಗಿದೆ ಎಂದರು.

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಶುಕ್ರವಾರ 28 ಜೂನ್ 2024
FRIDAY 28 June 2024

# ಸಾಧಕರಿಗೆ ಅಭಿನಂದನೆ, ಅದ್ದೂರಿ ಕೆಂಪೇಗೌಡರ ಜಯಂತಿ



ಪ್ರಬುದ್ಧ ಬೆಂಗಳೂರು ನಿರ್ಮಿಸುವಲ್ಲಿ ಕೆಂಪೇಗೌಡರ ಪಾತ್ರ ಅಪಾರ ಪ್ರತಿಯೊಬ್ಬರು ನಾಡಪ್ರಭು ಕೆಂಪೇಗೌಡರ ವ್ಯಕ್ತಿತ್ವ, ಕೀರ್ತಿ ಹಾಗೂ ಅವರ ಕಾರ್ಯಸಾಧನೆಗಳ ಅತ್ಯಮೂಲ್ಯ ಸಾರವನ್ನು ಅರಿತು, ಅವರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಹಶೀಲ್ದಾರ್ ಕೆ.ಎಸ್. ಸೋಮಶೇಖರ್ ತಿಳಿಸಿದರು. ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ತಾಲೂಕು ಆಡಳಿತ ಮತ್ತು ತಾಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಗುರುವಾರ ಹಮ್ಮಿಕೊಂಡಿದ್ದ ನಾಡಪ್ರಭು ಕೆಂಪೇಗೌಡರ 515 ನೇ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ನಾಡಪ್ರಭು ಕೆಂಪೇಗೌಡರು ರಣವೀರರಾಗಿದ್ದರಲ್ಲದೆ ನ್ಯಾಯ ನಿಷ್ಠೆ ಧರ್ಮಕ್ಕೆ ಹೆಸರಾಗಿದ್ದರು,

ಅವರ ಆಡಳಿತದಲ್ಲಿ ಹೊಂದಿದ್ದ ದೂರದೃಷ್ಟಿತ್ವದ ಫಲವಾಗಿ ಅಂದೆಯೇ ಜಗತ್ತಿನ ಎಲ್ಲಾ ವರಹಗಳು ವಿನಿಮಯವಾಗುತ್ತಿದ್ದ ಪ್ರಪಂಚದ ಏಕೈಕ ನಗರ ಎಂಬ ಹಿರಿಮೆ ಬೆಂಗಳೂರಿಗೆ ಪಾತ್ರವಾಗಿತ್ತು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಬೆಂಗಳೂರು ನಗರ ನಿರ್ಮಾಣದ ಜತೆಗೆ ವಿವಿಧ ಕುಲ ಕಸುಬು ಉಳ್ಳ ಸಮುದಾಯದವರು ನೆಲೆಸಲು 64 ಪೇಟೆಗಳನ್ನು ಕಟ್ಟಿ ಬೆಂಗಳೂರು ನಗರ ಕುಶಲತೆಯ ತವರಾಗಿಸಿ ಅಭಿವೃದ್ದಿಗೆ ಅಂದೆ ಪೀಠಿಕೆ ಹಾಕಿದರು, ಸಾವಿರ ಕೆರೆಗಳನ್ನು ನಿರ್ಮಿಸಿದ ಕೀರ್ತಿ ಇವರಿಗೆ ಸಲ್ಲುತ್ತದೆ. ಅದರ ಫಲವಾಗಿ ಇಂದು ಬೆಂಗಳೂರು ಬೃಹತ್ ನಗರವಾಗಿದೆ ವಿಶ್ವದ ಗಮನಸೆಳೆದಿದೆ ಎಂದರು.

ಭಾರತಿ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಪ್ರೊ.ಬಿ.ಎಸ್. ಬೋರೇಗೌಡ ಅವರು ನಾಡಪ್ರಭು ಕೆಂಪೇಗೌಡರ ಕುರಿತು ಪ್ರದಾನ ಭಾಷಣ ಮಾಡಿದರು.

ಅಭಿನಂದನೆ: ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ, ಬಿಇಡಿ ಪದವಿಯಲ್ಲಿ ಚಿನ್ನದ ಪದಕ ಪಡೆದ ನವ್ಯರಾಜ್ ಉಮಾಶಂಕರ ವಳಗೆರೆಹಳ್ಳಿ, ಸಂಪಾದಕ ಪುಟ್ಟಲಿಂಗೇಗೌಡ, ಜಿಲ್ಲಾ ರೈತ ನಾಯಕ ಅಣ್ಣೂರು ಮಹೇಂದ್ರ, ಸಾಮಾಜಿಕ ಕಾರ್ಯಕರ್ತ ಹುಲಿಗೆರೆಪುರ ಮಹಾದೇವ, ಹಾಗೂ ಸಮಾಜ ಸೇವೆಯಲ್ಲಿ ವಿದ್ಯಾವರ್ಧಕ ಕಾಲೇಜಿನ ನಿವೃತ್ತ ಗ್ರಂಥಪಾಲಕ ಕೆ.ಟಿ. ಕೃಷ್ಣಪ್ಪ ಅವರನ್ನು ತಾಲೂಕು ಆಡಳಿತ ವತಿಯಿಂದ ಅಭಿನಂದಿಸಿ ಕೆಂಪೇಗೌಡ ಪ್ರಶಸ್ತಿಯನ್ನು ಪ್ರದಾನಿಸಲಾಯಿತು.

ಬೃಹತ್ ಮೆರವಣಿಗೆ: ಕೆಂಪೇಗೌಡರ ಭಾವಚಿತ್ರವನ್ನು ಬೆಳ್ಳಿರಥದಲ್ಲಿ ವಿವಿಧ ಕಲಾತಂಡಗಳು ಹಾಗೂ ಶಾಲಾ ಮಕ್ಕಳೊಂದಿಗೆ ಬೃಹತ್ ಸಾಂಸ್ಕೃತಿಕ ನೃತ್ಯಗಳ ಮೂಲಕ ಪಟ್ಟಣದ ಶ್ರೀ ಉಗ್ರ ನರಸಿಂಹಸ್ವಾಮಿ ದೇವಸ್ಥಾನದಿಂದ ಹೊರಟು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ತಾಲೂಕು ಕ್ರೀಡಾಂಗಣಕ್ಕೆ ಆಗಮಿಸಿತು. ಶಾಲಾ ಮಕ್ಕಳು ನಡೆಸಿಕೊಟ್ಟ ಸಾಂಸ್ಕೃತಿಕ ಕಾರ್ಯಕ್ರಮಗಳು ಸಭಿಕರ ಗಮನ ಸೆಳೆಯಿತು.

ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎಚ್.ಕಾಳೀರಯ್ಯ ಅಖಿಲ ಕರ್ನಾಟಕ ಒಕ್ಕಲಿಗರ ಸಂಘದ ರಾಜ್ಯ ಕಾರ್ಯಾಧ್ಯಕ್ಷ ನ.ಲಿ.ಕೃಷ್ಣ, ತಾಲೂಕು ಅಧ್ಯಕ್ಷ ಶಿವಲಿಂಗೇಗೌಡ ಚಂದೂಪುರ, ಕಾರ್ಯದಶರ್? ಹಾಗಲಹಳ್ಳಿ ಬಸವರಾಜ್, ನಾಡಪ್ರಭು ಕೆಂಪೇಗೌಡ ಒಕ್ಕಲಿಗರ ಸಂಘದ ಅಧ್ಯಕ್ಷ ಪಿ.ಶಿವಪ್ಪ, ಕನ್ನಡ ಸಾಹಿತ್ಯ ಪರಿಷತ್ತಿನ ತಾಲ್ಲೂಕು ಅಧ್ಯಕ್ಷ ವಿ.ಸಿ. ಉಮಾಶಂಕರ, ತಾಲ್ಲೂಕು ಮಟ್ಟದ ಅಧಿಕಾರಿಗಳಾದ ಕೆ.ಎಂ. ರೇಖಾ, ಪ್ರಕಾಶ ಕೋರ್ಜಿ, ಡಾ.ಎಸ್.ಸಿ. ಮಂಗಳಮ್ಮ, ಡಾ.ಬಿ.ಬಿ. ಪ್ರವೀಣ್ ಕುಮಾರ್, ನಾರಾಯಣ್, ಮುಖಂಡರಾದ ತಿಪ್ಪೂರು ರಾಜೇಶ್, ಆತಗೂರು ವೆಂಕಟಚಲಯ್ಯ ಸೇರಿದಂತೆ ಇತರರು ಇದ್ದರು.

27ಎಂಡಿಆರ್1 : ಮದ್ದೂರು ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ತಾಲೂಕು ಆಡಳಿತ ಮತ್ತು ತಾಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ನಾಡಪ್ರಭು ಕೆಂಪೇಗೌಡರ 515 ನೇ ಜಯಂತಿ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಗಣ್ಯರನ್ನು ತಹಶೀಲ್ದಾರ್ ಕೆ.ಎಸ್. ಸೋಮಶೇಖರ್ ಅಭಿನಂದಿಸಿದರು. ಸಿ.ಎಚ್.ಕಾಳೀರಯ್ಯ, ನ.ಲಿ.ಕೃಷ್ಣ, ವಿ.ಸಿ.ಉಮಾಶಂಕರ್, ಶಿವಲಿಂಗೇಗೌಡ, ಬಸವರಾಜು, ಪಿ.ಶಿವಪ್ಪ, ತಿಪ್ಪೂರು ರಾಜೇಶ್ ಇದ್ದರು.

27ಎಂಡಿಆರ್2 : ಕಾರ್ಯಕ್ರಮದಲ್ಲಿ ಮದ್ದೂರು ಪಟ್ಟಣದ ಶಿವಪುರ ಪೂರ್ಣಪ್ರಜ್ಞಾಶಾಲೆಯ ವಿದ್ಯಾರ್ಥಿಗಳು ನಡೆಸಿಕೊಟ್ಟ ಸಾಂಸ್ಕೃತಿಕ ಕಾರ್ಯಕ್ರಮ ನೋಡುಗರ ಗಮನ ಸೆಳೆಯಿತು.

## ತಾಲ್ಲೂಕು ಆಡಳಿತದಿಂದ ಕೆಂಪೇಗೌಡ ಜಯಂತಿ ಆಚರಣೆ



ಆಲೂರು ತಾಲೂಕು ಕಚೇರಿ ತಾಲೂಕು ಪಂಚಾಯಿತಿ ಪಟ್ಟಣ ಪಂಚಾಯಿತಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಇಂದು ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ವತಿಯಿಂದ ಕೆಂಪೇಗೌಡ ಜಯಂತಿಯನ್ನು ಆಲೂರು ತಾಲೂಕು ಕಚೇರಿ ಆವರಣದಲ್ಲಿ ಆಚರಿಸಲಾಯಿತು

ತಾಲೂಕು ದಂಡಾಧಿಕಾರಿಗಳಾದ ನಂದ ಕುಮಾರ್ ಅಧ್ಯಕ್ಷತೆಯಲ್ಲಿ ಕೆಂಪೇಗೌಡ ಜಯಂತಿ ಆಚರಣೆಯನ್ನು ಕೆಂಪೇಗೌಡ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ನಂತರ ಮಾತನಾಡುತ್ತಾ...1537ರಲ್ಲಿ ಬೆಂದಕಾಳೂರು ಎಂಬ ನಗರವನ್ನು ಕಟ್ಟುವ ಮೂಲಕ ಬೆಂಗಳೂರು ಎಂಬ ಹೆಸರಿನ ನಗರವಿಂದು ಜಗತ್ಪ್ರಸಿದ್ಧ ನಗರವಾಗಿ ಬೆಳೆಯಲು ಕಾರಣರಾದವರು ಈ ಪ್ರಾಂತ್ಯದ ಅರಸ ಕೆಂಪೇಗೌಡ ಅವರ ಸಂಸ್ಮರಣಾ ದಿವಸವಿದು. ಹಾಗಾಗಿಯೇ, ಜೂನ್ 27ರಂದು ಕೆಂಪೇಗೌಡ ಜಯಂತ್ಯೋತ್ಸವವನ್ನು ಆಚರಿಸಲಾಗುತ್ತಿದೆ

ರಾಜ್ಯ ಸರ್ಕಾರವು ಇದೇ ಮೊದಲಿಗೆ ಕೆಂಪೇಗೌಡರ ಜಯಂತಿಯನ್ನು ನಾಡಿನಾದ್ಯಂತ ಆಚರಿಸಲು ನಿರ್ಧರಿಸಿದೆ. ಹಾಗಾಗಿ, ಈ ಬಾರಿಯ ಕೆಂಪೇಗೌಡರ ಜಯಂತಿಗೆ ಮತ್ತಷ್ಟು ಮಹತ್ವ ಬಂದಿದೆ. ಈ ಸಂದರ್ಭದಲ್ಲಿ ತಾಲೂಕು ದಂಡಾಧಿಕಾರಿಗಳಾದ ನಂದಕುಮಾರ್,ಒಕ್ಕಲಿಗ ಸಮುದಾಯದ ತಾಲ್ಲೂಕು ಅಧ್ಯಕ್ಷರು ಎಮ್ಮಿಗೆ ಮೋಹನ್, ತಾಲೂಕು ಉಪಾಧ್ಯಕ್ಷರು ಕಣದಳ್ಳಿ ಮಂಜೇಗೌಡ, ಶಿಕ್ಷಕರಾದ ಕೊಟ್ರೇಶ್, ಡಾಕ್ಟರ್ ಜಯರಾಜ್, ಹನುಮಂತೇಗೌಡ,ರಂಗೇಗೌಡ,, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಶ್ರೀನಿವಾಸ್, ಶಿಶು ಯೋಜನ ಅಭಿವೃದ್ಧಿ ಅಧಿಕಾರಿ ಶ್ರೀಯುತ ಮಲ್ಲೇಶ್, ಉಪ ತಾಶಿಲ್ದಾರ್ ಸೋಮಣ್ಣ ,, ಕನ್ನಡ ಸಾಹಿತ್ ಪರಿಷತ್ ತಾಲೂಕು ಅಧ್ಯಕ್ಷರಾದ ಗೋಪಿನಾಥ್, ಕಾಂಗ್ರೆಸ್ ತಾಲೂಕು ಅಧ್ಯಕ್ಷ ಶಿವಮೂರ್ತಿ,ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ರುದ್ರೇಶ್ ರವರು, ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ನಾಡಪ್ರಭು ಕೆಂಪೇಗೌಡರ 515ನೇ ಜಯಂತ್ಯುತ್ಸವ ಕಾರ್ಯಕ್ರಮ



ತಿ.ನರಸೀಪುರ:– ಮಹನೀಯರು ನೀಡಿರುವ ಮೌಲ್ಯಗಳು ಅವರನ್ನು ಇಂದು ಸ್ಮರಣೆ ಮಾಡುವಂತೆ ಮಾಡುತ್ತಿವೆ ಎಂದು ತಹಸೀಲ್ದಾರ್ ಟಿ.ಜಿ.ಸುರೇಶಾಚಾರ್ ಹೇಳಿದರು. ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣ ದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಮತ್ತು ತಾಲೂಕು ಒಕ್ಕಲಿಗರ ಸಂಘದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ನಾಡಪ್ರಭು ಕೆಂಪೇಗೌಡರ 515ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಸುರೇಶಾಚಾರ್ ಮಹನೀಯರು ಸಮಾಜದ ಸರಿ ದಾರಿಗೆ ಅತ್ಯಮೂಲ್ಯ ಕೊಡುಗೆಗಳನ್ನು ನೀಡಿರುವ ಹಿನ್ನೆಲೆಯಲ್ಲಿ ಅವರ ಹುಟ್ಟುಹಬ್ಬಗಳ ಆಚರಣೆ ಆಚರಿಸಿ ಆ ಮೂಲಕ ಸಮಾಜದಲ್ಲಿ ಮಹನೀಯರ ಹಾದಿಯಲ್ಲಿ ಸಾಗಲು ಸಂದೇಶ ನೀಡಲಾಗುತ್ತದೆ ಎಂದರು. 16ನೇ ಶತಮಾನದಲ್ಲೇ ಬೆಂಗಳೂರು ನಿರ್ಮಿಸಿ ಕೆರೆ ಕಟ್ಟೆ, ಮಾರುಕಟ್ಟೆ, ಹೆಬ್ಬಾಗಿಲು ಮತ್ತು ಪರಿಸರ ಸಮತೋಲನಕ್ಕಾಗಿ ಗಿಡ ಮರಗಳನ್ನು ವಿಪುಲವಾಗಿ ಬೆಳೆಸಿದ್ದರು ಹಾಗಾಗಿ ಅವರನ್ನು ನಾಡ ಪ್ರಭು ಎಂದು ಕರೆಯಲಾಗುತ್ತಿದೆ. ವ್ಯಕ್ತಿಯಲ್ಲಿ ಸಾಕಷ್ಟು ಪ್ರತಿಭೆಗಳಿರುತ್ತವೆ. ಆದರೆ ಅವುಗಳಲ್ಲಿ ಸಮಾಜಮುಖಿ ತುಡಿತ ಇದ್ದಾಗ ಅಂತಹ ವ್ಯಕ್ತಿ ಅತ್ಯಂತ ಪ್ರಸಿದ್ದಿಯಾಗುತ್ತಾನೆ. ನಾವು ಅಂತಹ ಮಹನೀಯರ ಮೌಲ್ಯಗಳನ್ನು ಅರಿತು ಅದೇ ಪಥದಲ್ಲಿ ಸಾಗುವ ಪ್ರತಿಜ್ಞೆ ಮಾಡೋಣ ಎಂದರು. ಹಿರಿಯ ವಕೀಲ ದೊಡ್ಡಲಿಂಗೇಗೌಡ ಮಾತನಾಡಿ, ಬೆಂಗಳೂರು ಇಂದು ಜಗತ್ತಿನ ಪ್ರಮುಖ ವಾಣಿಜ್ಯ ಕೇಂದ್ರವಾಗಿದೆ. ಬೆಂಗಳೂರನ್ನು ಪ್ರಪಂಚದ ಪ್ರಮುಖ ವಾಣಿಜ್ಯ ಕೇಂದ್ರವಾಗಿ ರೂಪಿಸುವ ದೂರದೃಷ್ಟಿಯ ಪರಿಕಲ್ಪನೆಯನ್ನು ಕೆಂಪೇಗೌಡ ಅವರು ಹೊಂದಿದ್ದರು. ಹಾಗಾಗಿ ನಗರ ನಿರ್ಮಾಣಕ್ಕೆ ಅವಶ್ಯವಾದ ಎಲ್ಲವನ್ನು ಬೆಂಗಳೂರು ನಗರದಲ್ಲಿ ನಿರ್ಮಿಸಿದ್ದರು. ಅವರು ಸರ್ವಜನಾಂಗದ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ಬೆಂಗಳೂರು ನಗರವನ್ನು ನಿರ್ಮಾಣ ಮಾಡಿದ್ದರು ಎಂದು ಶ್ಲಾಘಿಸಿದರು. ಮುಖ್ಯ ಭಾಷಣಕಾರ ಶಿಕ್ಷಕ ರಮೇಶ್ ಮಾತನಾಡಿ, ಮಹನೀಯರು ಸಮಾಜಕ್ಕೆ ಮಾಡಿದ ಸತ್ಕಾರ್ಯಗಳ ಸ್ಮರಣೆಗಾಗಿ ಜಯಂತಿಗಳನ್ನು ಆಚರಿಸುತ್ತಿದ್ದೇವೆ ಎಂದು ಜನ್ಮದಿನದ ಔಚಿತ್ಯವನ್ನು ತಿಳಿಸಿದರು.

ನಾಡಪ್ರಭು ಕೆಂಪೇಗೌಡರು ಅತ್ಯಂತ ಧೈರ್ಯಶಾಲಿ ಯಾಗಿದ್ದು, ಬೆಂಗಳೂರಿನಲ್ಲಿ ಸಮಸಮಾಜ ನಿರ್ಮಾಣದ ದೂರದೃಷ್ಠಿ ಯನ್ನು ಅವರು ಹೊಂದಿದ್ದರು ಎಂದರು. ಸಂದರ್ಭದಲ್ಲಿ ಸಮುದಾಯದ ಮುಖಂಡರರಾದ ಯಾಚೇನಹಳ್ಳಿ ರಾಮಸ್ವಾಮಿ, ಬನ್ನೂರು ನಾರಾಯಣ್, ರಮೇಶ್ ಮುದ್ದೇಗೌಡ,ಸಮಾಜ ಸೇವಕ ಮಣಿಕಂಠ ರಾಜ್ ಗೌಡ ಡಾ. ಮಲ್ಲಿಕಾರ್ಜುನಸ್ವಾಮಿ, ಗುರುಪ್ರಸಾದ್, ರಾಮ ಚಂದ್ರ, ಶಿಕ್ಷಕ ತಲಕಾಡು ನಾಗೇಂದ್ರ, ರೈತ ಮುಖಂಡ ಬನ್ನೂರು ನಾರಾಯಣ್, ರಾಜೂಗೌಡ, , ತಾಲೂಕು ಬಾಬು ಜಗಜೀವನ್ ರಾಮ್ ಸಂಘದ ಅಧ್ಯಕ್ಷ ಹುಣಸೂರು ಪುಟ್ಟಯ್ಯ, ತಾ.ಪಂ. ಯೋಜನಾಧಿಕಾರಿ ಜಯಂತಿ, ಬಿಇಓ ಜಿ. ಶೋಭಾ, ಲೋಕೋಪಯೋಗಿ ಎಇಇ ಸತೀಶ್ ಚಂದ್ರನ್, ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕಿ ಶಾಂತ, ಕೃಷಿ ಇಲಾಖೆ ಎಡಿ ಯಶಸ್ವಿನಿ, ಮೀನುಗಾರಿಕೆ ಇಲಾಖೆ ಸಹಾಯಕ ನಿರ್ದೇಶಕಿ ಶ್ವೇತಾ, ಸಿಡಿಪಿಓ ಗೋವಿಂದರಾಜು, ನೀರಾವರಿ ಇಲಾಖೆ ಎಇಇ ಚೆಂಗಪ್ಪ, ತಾ. ಸರ್ವೆ ಇಲಾಖೆಯ ಸಹಾಯಕ ನಿರ್ದೇಶಕ ಪಂಚ ಲಿಂಗಪ್ಪ, ಗ್ರೇಡ್ –2 ತಹಸೀಲ್ದಾರ್ ರಾಜಕಾಂತ್, ತಾಲೂಕು ನೌಕರರ ಸಂಘದ ಅಧ್ಯಕ್ಷ ಶಿವಶಂಕಮೂರ್ತಿ, ಪುರಸಭೆ ಮುಖ್ಯಾಧಿಕಾರಿಗಳಾದ ವಸಂತಕುಮಾರಿ, ಹೇಮಂತ್ ರಾಜ್, ತಾಲೂಕು ಅರೋಗ್ಯಧಿಕಾರಿ ಡಾ. ರವಿಕುಮಾರ್, ಸಮಾಜ ಕಲ್ಯಾಣ ಅಧಿಕಾರಿ ರಾಮೇಗೌಡ, ಚೆಲುವರಾಜ್, ರಾಜೇಶ್, ಆರ್. ಐ. ಮಹೇಂದ್ರ, ಬಿಸಿಯೂಟ ಸಹಾಯಕ ನಿರ್ದೇಶಕ ಮದ್ದಾನಪ್ಪ, ರಾಜೇಶ್,ಅರುಣ್ ಮತ್ತಿತರರು ಹಾಜರಿದ್ದರು.

## ತಹಶೀಲ್ದಾರ ಕಾರ್ಯಾಲಯದಲ್ಲಿ ಕೆಂಪೇಗೌಡರ ಜಯಂತಿ ಆಚರಣೆ

ಮುಂಜಾನೆ ವಾರ್ತೆ ಸುದ್ದಿ ತಾಳಿಕೋಟಿ: ತಹಶೀಲ್ದಾರ ಕಾರ್ಯಾಲಯದಲ್ಲಿ ಬೆಂಗಳೂರು ನಿರ್ಮಾತೃ ನಾಡಪ್ರಭು ಶ್ರೀ ಕೆಂಪೇಗೌಡರ 515 ನೇ ಜಯಂತಿಯನ್ನು ಗುರುವಾರ ಆಚರಿಸ ಲಾಯಿತು. ಜಯಂತೋತ್ಸವದ ಅಂಗವಾಗಿ ಉಪ ತಹಸಿಲ್ದಾರ ಶ್ರೀಮತಿ ಜೆ.ಐ.ತುಬಾಕೆ ಅವರು ನಾಡಪ್ರಭು ಶ್ರೀ ಕೆಂಪೇಗೌಡರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪ ನಮನ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಗಣ್ಯರಾದ ಕಸಾಪ ಅಧ್ಯಕ್ಷ ಆರ್.ಎಲ್. ಕೊಪ್ಪದ.



ಮಂಜುನಾಥ ಶೆಟ್ಟಿ. ರಾಘವೇಂದ್ರ ಚೌವಾಣ.ಬಿಆರ್ ಸಿ ಸಜ್ಜನ.ಸಿ ಆರ್ ಸಿ ರಾಜು ಬಿಜಾಪುರ. ಸರ್ಕಲ್ ವಿನೋದ ಸಿಂದಗಿ. ಕಾರ್ಯಾಲಯದ ಸಿಬ್ಬಂದಿಗಳಾದ ಆರ್.ಎಸ್. ಮೂಕಿಹಾಳ. ಶೈಲಾ ಕಂಚಾಣಿ. ಆನಂದ ಇವಣಗಿ.ಮುನ್ನಾ ಅತ್ತಾರ.ವಿನಾಯಕ ಕಂಗಲ್ಲ.ರಾಜು ಪಾಟೀಲ.ವಿರೇಶ ಬಿರಾದಾರ ಸೇರಿದಂತೆ ಮತ್ತಿತರರು ಇದ್ದರು.

## ಅಡಮಾನ ಭೂಮಿ ಹರಾಜು ನಿಲ್ಲಿಸದಿದ್ದರೆ ಕಾನೂನು ಭಂಗ ಚಳವಳಿ
## ರೈತ ಸಂಘದ ಮುಖಂಡ ಕೆ.ಟಿ.ಗಂಗಾಧರ್ ಎಚ್ಚರಿಕೆ

*ಇಂತಹ ಕರಾಳ ಕೃಷಿ ಕಾಯಿದೆಗಳನ್ನು ಮಾಡಬಾರದು, ಇತ್ತೀಚಿನ ದಿನಗಳಲ್ಲಿ ಕೃಷಿ ಲಾಭದಾಯಕವಾಗಿ ಉಳಿದಿಲ್ಲ. ಈ ಹಿನ್ನೆಲೆ ವಿದ್ಯಾವಂತರು ಕೃಷಿಯತ್ತ ಒಲವು ತೋರಿಸಿದರೆ ಪ್ರೋತ್ಸಾಹಿಸುವ ಕೆಲಸ ಮಾಡಬೇಕು. ಅದನ್ನು ಬಿಟ್ಟು ಹೆದರಿಸುವ, ಆತಂಕ ಸೃಷ್ಟಿಸುವ ವಾತಾವರಣ ನಿರ್ಮಾಣ ಮಾಡುವುದು ಖಮಡನಿಯ ಎಂದರು.*




ಹಾಸನ: ಸರ್ಫೇಸಿ ಕಾಯಿದೆ ಹೆಸರಲ್ಲಿ ರೈತರ ಅಡಮಾನ ಭೂಮಿಯ ಇ ಹರಾಜು ಮಾಡುವುದನ್ನು ಸರ್ಕಾರ ಹಾಗೂ ಬ್ಯಾಂಕುಗಳು ಮುಂದುವರಿಸಿದರೆ ರಾಜ್ಯಾದ್ಯಂತ ಕಾನೂನು ಭಂಗ ಚಳವಳಿ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ರೈತ ಸಂಘದ ಮುಖಂಡ ಕೆ.ಟಿ. ಗಂಗಾಧರ್ ಎಚ್ಚರಿಸಿದರು.

ನಗರದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿದ ಅವರು, ಬರು ರಾಷ್ಟ್ರೀಯ ಕಂಪೆನಿಗಳನ್ನು ಮತ್ತಷ್ಟು ಬೆಳೆಸುವ ಉದ್ದೇಶದಿಂದ ರೈತರ ಭೂಮಿಯನ್ನು ಹಂತ ಹಂತವಾಗಿ ಕಿತ್ತುಕೊಳ್ಳುವ ಕುತಂತ್ರ ಕರ್ನಾಟಕ ಒಳಗೊಂಡು ದೇಶಾದ್ಯಂತ ನಡೆಯುತ್ತಿದೆ. ಈಲ್ಲೆಯಲ್ಲಿಯೂ ಈಗಾಗಲೇ ಇಬ್ಬರು ರೈತರ ಅಡಮಾನ ಭೂಮಿಯನ್ನು ಇ ಹರಾಜು ಮೂಲಕ ಕಸಿದುಕೊಂಡಿದ್ದು 50ಕ್ಕೂ ಹೆಚ್ಚು ಕೃಷಿಕರಿಗೆ ನೋಟಿಸ್ ಜಾರಿ ಮಾಡಿದೆ. ಜಿಲ್ಲಾ ಉಸ್ತುವಾಇ ಸಚಿವರು, ಜಿಲ್ಲಾಧಿಕಾರಿ ಈ ಬಗ್ಗೆ ಕೂಡಲೇ ಗಮನ ಹರಿಸಿ ಸರ್ಕಾರದ ಗಮನ ಸೆಳೆಯಬೇಕು. ಸರ್ಫೆಸಿ ಕಾಯಿದೆಯನ್ನು ಕೃಷಿ ವಲಯದಿಂದ ದೂರವಿಡಬೇಕು. ಇಲ್ಲವಾದರೆ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಕೇಂದ್ರದಲ್ಲಿ ವಾಜಪೇಯಿ ಸರ್ಕಾರ ಇದ್ದಾಗ ಜಾರಿಗೆ ಬಂದ ಕಾಯ್ದೆ ಅನುಷ್ಠಾನ ಆಗದಂತೆ ನೋಡಿಕೊಂಡಿದ್ದೆವು. ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರು ಕೃಷಿ ವಲಯದಿಂದ ಈ ಕಾಯ್ದೆ ಹೊರಗಿಟ್ಟಿದ್ದರು. 2019 ರಲ್ಲಿ ಮೋದಿ ಅವರು ಪ್ರಧಾನಿ ಆದ ನಂತರ ಸರ್ಫೆಸಿ ಕಾಯಿದೆಯನ್ನು ಮರು ಜಾರಿ ಮಾಡಿದರು. ಜಿಲ್ಲೆಯೊಂದರಲ್ಲೇ ಕೆನರಾ ಬ್ಯಾಂಕ್‌ನಿಂದ ಬೇಲೂರು, ಆಲೂರು ಸಕಲೇಶಪುರ ವ್ಯಾಪ್ತಿಯಲ್ಲಿ ಹರಾಜು ಪ್ರಕ್ರಿಯೆ ಮಾಡಿ ಭೂಮಿ ಕಸಿದುಕೊಂಡಿದ್ದಾರೆ. ಸಾಲ ತಿರುವಳಿ ಮಾಡಿದರೂ ಅವರ ಖಾತೆಗಳ ಮೇಲೆ ಹಿಡಿತ ಸಾಧಿಸಿ, ಮಕ್ಕಳಿಗೆ ಸಾಲ ಸಿಗದಂತೆ ಮಾಡುತ್ತಿದ್ದಾರೆ. ಇದು ರೈತ ವಿರೋಧಿ ನೀತಿಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸರ್ಫೆಸಿ ಕಾಯಿದೆಯ ಮೂಲಕ ಸಾಲ ವಸೂಲಾತಿಯನ್ನು ಕೂಡಲೇ ನಿಲ್ಲಿಸಬೇಕು. ಇಂತಹ ಕರಾಳ ಕೃಷಿ ಕಾಯಿದೆಗಳನ್ನು ಮಾಡಬಾರದು, ಇತ್ತೀಚಿನ ದಿನಗಳಲ್ಲಿ ಕೃಷಿ ಲಾಭದಾಯಕವಾಗಿ ಉಳಿದಿಲ್ಲ. ಈ ಹಿನ್ನೆಲೆ ವಿದ್ಯಾವಂತರು ಕೃಷಿಯತ್ತ ಒಲವು ತೋರಿಸಿದರೆ ಪ್ರೋತ್ಸಾಹಿಸುವ ಕೆಲಸ ಮಾಡಬೇಕು. ಅದನ್ನು ಬಿಟ್ಟು ಹೆದರಿಸುವ, ಆತಂಕ ಸರಷ್ಟಿಸುವ ವಾತಾವರಣ ನಿರ್ಮಾಣ ಮಾಡುವುದು ಖಮಡನಿಯ ಎಂದರು.

ಸುದ್ದಿಗೋಷ್ಠಿಯಲ್ಲಿ ರೈತ ಸಂಘದ ಹಿರಿಯ ಮುಖಂಡರಾದ ಚುಕ್ಕೆ ನಂಜುಂಡಸ್ವಾಮಿ, ಮಂಜುಕಿರಣ್, ಬಳ್ಳೂರು ಸ್ವಾಮಿಗೌಡ, ಕಣಗಾಲ್ ಮೂರ್ತಿ, ರಾಜೇಗೌಡ ಇತರರು ಭಾಗವಹಿಸಿದ್ದರು.

## ಸಾಗರ ತಾಲ್ಲೂಕು ಆಡಳಿತದಿಂದ ಕೆಂಪೇಗೌಡರ ಜಯಂತಿ ಆಚರಣೆ



500 ವರ್ಷದ ಹಿಂದೆಯೇ ಬೆಂಗಳೂರು ನಗರ ಕಟ್ಟಿದ್ದ ಕೆಂಪೇ ಗೌಡರು, ಇಂದಿನ ಅಗತ್ಯತೆಯನ್ನು ಅಂದೇ ಅರಿತಿದ್ದ ದಕ್ಷ ಆಡಳಿತಗಾರ ರಾಗಿದ್ದರು ಎಂದು ಉಪವಿಭಾಗಾಧಿಕಾರಿ ಆರ್. ಯತೀಶ್ ಅಭಿಪ್ರಾಯ ಪಟ್ಟರು. ತಾಲೂಕು ಕಚೇರಿಯಲ್ಲಿ ಗುರುವಾರ ನಡೆದ ಕೆಂಪೇಗೌಡರ 515ನೇ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಅವರ ಆಡಳಿತದ ದೂರದೃಷ್ಟಿಯ ಛಾಪು ಕೃತಿಯಲ್ಲಿ ಮೂಡಿದ್ದಲ್ಲದೆ, ಜನರ ಅಗತ್ಯತೆಗಳನ್ನು ಅರಿತು ಅಧಿಕಾರ ನಡೆಸಿದ್ದರು. ನೂರಾರು ಕೆರೆ–ಕಟ್ಟೆಗಳ ನಿರ್ಮಾಣ, ಪಟ್ಟಣದಲ್ಲಿಯೂ ಉದ್ಯಾನದ ಅಗತ್ಯತೆ, ನಗರದ ವ್ಯವಸ್ಥಿತ ರಸ್ತೆಗಳು ಅವರನ್ನು ಇಂದಿಗೂ ನಾಡು ಸ್ಮರಿಸುವಂತೆ ಮಾಡಿದೆ. ನಾಡ ಪ್ರಭು ಕೆಂಪೇಗೌಡರು ಅಂದು ಕಟ್ಟಿದ ಬೆಂಗಳೂರನ್ನು ಇಂದು ವಿಶ್ವವೇ ತಿರುಗಿ ನೋಡುತ್ತಿದೆ ಎಂದರು. ಕೆಂಪೇಗೌಡರ ಕುರಿತು ಕಸಾಪ ತಾಲೂಕು ಅಧ್ಯಕ್ಷ ವಿ.ಟಿ. ಸ್ವಾಮಿ ವಿಶೇಷ ಉಪನ್ಯಾಸ ನೀಡಿದರು. ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಜಿ. ಪರಮೇಶ್ವರಪ್ಪ ಮಾತನಾಡಿದರು. ವೇದಿಕೆಯಲ್ಲಿ ಎಡಿಎಲ್‌ಆರ್ ಗೋಪಿನಾಥ್ ಹಾಜರಿದ್ದರು.

Printed by : H.L.AMARANATH, Owned by: H.L.AMARANATH, Printed at : SREE MANJUNATHA ENTERPRISES No. 7, Tirugappa lane, Cottonpet cross, Cottonpet, Bangalore-560053.
Published at : No.97, 2nd Cross, Vivekanandanagar, Khadi Commission Layout, BSK 3rd Stage, Kathariguppe Main Road, Bengaluru-560085. Mobile: 9663122276 Editor : H.L.AMARANATH